ಸಂಪುಟ : 11 ಸಂಚಿಕೆ: 81 ಪುಟ : 4+2 ಬೆಲೆ: 3.00 ಬುಧವಾರ ಎಪ್ರಿಲ್ 29 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 81 Pages : 4+2 Price : 3.00 Wednesday April 29 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಶತಮಾನಗಳ ಹಳೆಯ ಪತ್ರಗಳ ಉಳಿವಿಗೆ 'ಜ್ಞಾನ ಭಾರತಂ ಮಿಷನ್' ಅಡಿಯಲ್ಲಿ ಹಳೆಯ ಪತ್ರಗಳ ಉಳಿವು | ಹಸ್ತಪ್ರತಿಗಳ ಸಮೀಕ್ಷೆಗೆ ಸಾರ್ವಜನಿಕರಿಂದ ಸಹಕಾರ ಕೋರಿಕೆ**

## ಹಸ್ತಪ್ರತಿಗಳ ಸಂರಕ್ಷಣೆ- ಡಿಜಿಟಲೀಕರಣಕ್ಕೆ ಮಹತ್ವದ ಹೆಜ್ಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ಸರ್ಕಾರದ ಕೇಂದ್ರ ಸಂಸ್ಕೃತಿ ಮಂತ್ರಾಲಯದ 'ಜ್ಞಾನ ಭಾರತಂ ಮಿಷನ್' ಯೋಜನೆಯಡಿ ದೇಶಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಹಸ್ತಪ್ರತಿಗಳು, ಕೈಬರಹದ ಪತ್ರಗಳು ಹಾಗೂ ದಾಖಲೆಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯಯೋಜನೆ ಕೈಗೊಳ್ಳಲಾಗಿದೆ.

ಈ ಯೋಜನೆಯಡಿ ಹಸ್ತಪ್ರತಿಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆ ಕಾರ್ಯಗಳನ್ನು ನೆರವೇರಿಸಿ, ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡುವ ಉದ್ದೇಶ ಹೊಂದಲಾಗಿದೆ.

ಗದಗ ಜಿಲ್ಲೆಯಾದ್ಯಂತ ಗ್ರಂಥಾಲಯಗಳು, ದೇವಸ್ಥಾನಗಳು, ಖಾಸಗಿ ಟ್ರಸ್ಟ್‌ಗಳು, ಧಾರ್ಮಿಕ ಸಂಸ್ಥೆಗಳು, ಮಠಗಳು, ಆಶ್ರಮಗಳು ಹಾಗೂ ಖಾಸಗಿ ಸಂಗ್ರಹಕರಲ್ಲಿ ಇರುವ ಹಸ್ತಪ್ರತಿಗಳನ್ನು ಸ್ವಯಂಪ್ರೇರಿತವಾಗಿ ನೀಡಲು ಕೋರಲಾಗಿದೆ.

ಹಸ್ತಪ್ರತಿಗಳನ್ನು ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ವಿದ್ವಾನ ಎಸ್.ಎಂ. ಸಿಂಪಿಗೇರ (9845792371), ವಿದ್ವಾನ ಜಿ.ಎಸ್. ಗೊಂಕರ (9341849134), ಗುರುಸಿದ್ದಯ್ಯ ಹೀರೆಮಠ (9482381001), ಶ್ರೀದರ ರಾವ್ (8277630370), ಕೊಟ್ರೇಶ್ವರ ವೈ ವಿಭೂತಿ (9844269430) ಅವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಮುಳಗುಂದ ನಾಕಾ, ಗದಗ ಸಂಪರ್ಕಿಸಬಹುದಾಗಿದೆ.

**49 ಲಕ್ಷದ ಪಶು ಚಿಕಿತ್ಸಾ ಕೇಂದ್ರ ನಿರ್ಮಾಣಕ್ಕೆ ಶಾಸಕ ಜಿ.ಎಸ್. ಪಾಟೀಲ ಭೂಮಿಪೂಜೆ**

# ಪಂಚ ಗ್ಯಾರಂಟಿಯಿಂದ ಬಡವರ ಜೀವನಕ್ಕೆ ಭರವಸೆ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಜನತೆಯನ್ನು ಆರ್ಥಿಕವಾಗಿ ಮುಖ್ಯ ಪ್ರವಾಹಕ್ಕೆ ತರಲು ಮಹತ್ವದ ಪಾತ್ರ ವಹಿಸಿದ್ದು, ಸರ್ಕಾರ ಮಾತು ಕೊಟ್ಟಂತೆ ಪ್ರಾಮಾಣಿಕವಾಗಿ ಭರವಸೆಗಳನ್ನು ಉಳಿಸಿಕೊಂಡಿದೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಹಾರೋಗೇರಿ ಗ್ರಾಮದಲ್ಲಿ ಕರ್ನಾಟಕ ಸರ್ಕಾರ, ಜಿಲ್ಲಾ ಪಂಚಾಯತ್ ಗದಗ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ 2024-25ನೇ ಸಾಲಿನ ಆರ್.ಐ.ಡಿ.ಎಫ್ ಯೋಜನೆಯಡಿ 49 ಲಕ್ಷ ವೆಚ್ಚದಲ್ಲಿ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ, ಪಿಂಚಣಿ ಆದೇಶ ಪ್ರತಿಗಳನ್ನು ವಿತರಿಸಿ, ವಿಕಲಚೇತನರಿಗೆ ವೀಲ್‌ಚೇರ್‌ಗಳನ್ನು ವಿತರಿಸಿ ಮಾತನಾಡಿದರು.

150 ಕೋಟಿ ಯೋಜನೆಯಡಿ ತೋಟಗಾರಿಕಾ ಕಾಲೇಜಿಗೆ ಮಂಜೂರಾತಿ ದೊರೆತಿದ್ದು, ಕಾಲೇಜನ್ನು ತಾತ್ಕಾಲಿಕವಾಗಿ ಖಾಸಗಿ ಕಟ್ಟಡದಲ್ಲಿ ಪ್ರಾರಂಭಿಸಲು ಸರ್ಕಾರಕ್ಕೆ ಒತ್ತಾಯ ಮಾಡಲಾಗಿದೆ. ಎಸ್‌ಸಿ ಕಾಲೋನಿಗೆ 20 ಲಕ್ಷ, ಸರ್ಕಾರಿ ಶಾಲೆಯ ಮೇಲ್ಚಾವಣಿಗೆ 4 ಲಕ್ಷ, ಮರುಳಸಿದ್ದೇಶ್ವರ ದೇವಸ್ಥಾನಕ್ಕೆ 5 ಲಕ್ಷ, ಡಂಬಳ ಕೆರೆಯ ಸೌಂದರೀಕರಣಕ್ಕೆ 5 ಕೋಟಿ ಅನುದಾನ ಬಿಡುಗಡೆಗೊಳಿಸಲಾಗುವುದು ಎಂದು ತಿಳಿಸಿದರು. ಪಂಚಗ್ಯಾರಂಟಿ ಯೋಜನೆಗಳನ್ನು ಅಧಿಕಾರಿಗಳು ಅಚ್ಚುಕಟ್ಟಾಗಿ ಜಾರಿಗೆ ತಂದು, ನೇರವಾಗಿ ಜನರ ಖಾತೆಗಳಿಗೆ ಹಣ ಜಮೆಯಾಗುವಂತೆ ಮಾಡುತ್ತಿರುವುದು ಪ್ರಶಂಸನೀಯ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಡವರ ಬಗ್ಗೆ ಅಪಾರ ಕಾಳಜಿ ಹೊಂದಿದ್ದು, ಸುಮಾರು 1 ಕೋಟಿ 25 ಲಕ್ಷ ಜನರನ್ನು ಆರ್ಥಿಕ ಮುಖ್ಯ ಪ್ರವಾಹಕ್ಕೆ ತರಲು ಯಶಸ್ವಿಯಾಗಿದ್ದಾರೆ ಎಂದು ಹೇಳಿದರು. ಡಾ. ಎಚ್.ಬಿ. ಹುಲಗಣ್ಣವರ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಪಶುವೈದ್ಯಕೀಯ ಸೇವೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಬೇಸಿಗೆಯ ಹಿನ್ನೆಲೆಯಲ್ಲಿ ಪ್ರತಿಯೊಂದು ಆಕಳು, ದನಗಳಿಗೆ ಲಸಿಕೆ ಹಾಕಿಸಬೇಕು ಎಂದು ಸಲಹೆ ನೀಡಿದರು. ಮುಂಡರಗಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಡಿ.ಡಿ. ಮೋರನಾಳ, ತಹಸೀಲ್ದಾರ್ ಯರಿಸ್ವಾಮಿ ಪಿ.ಎಸ್. ಅವರು ಮಾತನಾಡಿದರು.

> "ಪಂಚಗ್ಯಾರಂಟಿ ಯೋಜನೆಗಳ ಮೂಲಕ ಬಡವರನ್ನು ಆರ್ಥಿಕ ಮುಖ್ಯ ಪ್ರವಾಹಕ್ಕೆ ತರಲು ಸರ್ಕಾರ ಬದ್ಧವಾಗಿದೆ"
>
> **– ಜಿ.ಎಸ್. ಪಾಟೀಲ, ಶಾಸಕ**

ಲಿಂ. ಡಾ. ಸಿದ್ಧಲಿಂಗ ಮಹಾಸ್ವಾಮಿಗಳು ರೈತರಾಗಿ ತಾವು ಹೊಲದಲ್ಲಿ ದುಡಿದು ದಾಳಿಂಬೆ, ದ್ರಾಕ್ಷಿ ಬೆಳೆದು ರೈತರ ಹಿತಕ್ಕಾಗಿ ಶ್ರಮಿಸಿದ ಮಹನೀಯರು ಎಂದು ಸ್ಮರಿಸಿದರು. ಗ್ರಾಮೀಣ ಜನತೆಯ ಹಿತಕ್ಕಾಗಿ ಗುಂಟೆವಾರು ಭೂಮಿಗಳನ್ನು ಖರೀದಿಸಿದವರಿಗೆ ಇ-ಸ್ವತ್ತು ದಾಖಲೆಗಳನ್ನು ನೀಡಿ ಹಕ್ಕುಪತ್ರ ನೀಡಲಾಗುವುದು. ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಶಾಸಕ ಜಿ. ಎಸ್ ಪಾಟೀಲ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಕ್ಫ್ ಬೋರ್ಡ್ ಉಪಾಧ್ಯಕ್ಷ ಯೂಸುಫ್ ಈಟಿ, ಜಿಲ್ಲಾ ಉಪಾಧ್ಯಕ್ಷ ಡಾ. ಬಿ.ಎಸ್. ಮೇಟಿ, ಭುವನೇಶ್ವರಿ ಕಲ್ಲಿಕುಟಿಗರ, ಪುಲಕೇಶಗೌಡ ಪಾಟೀಲ, ಬಸುರಾಜ ಕಣವಿ, ತಿಪ್ಪಣ್ಣ ಬಜಮ್ಮನವರ, ಬಸವರಡ್ಡಿ ಬಂಡಿಹಾಳ, ಗೌಸುಸಾಬ ಡಂಬಳ, ಪರತಗೌಡ ಪಾಟೀಲ, ಮಹೇಶ್ ಗಡಗಿ, ಗೋಣಿಬಸಪ್ಪ ಕೊರ್ಲಹಳ್ಳಿ, ಮಲ್ಲಿಕಾರ್ಜುನ ಪ್ಯಾಟಿ, ಸುರೇಶ್ ಗಡಗಿ, ಬಾಬುಸಾಬ ಮೂಲಿಮನಿ, ಮಾರುತಿ ಹೊಂಬಳ, ರವಿ ಜವಿ, ಬಶೀರಸಾಬ ಒಡ್ಡಟ್ಟಿ, ಮನೋಜಗೌಡ ಪಾಟೀಲ, ಭೀಮಪ್ಪ ಗದಗಿನ, ಬಸುರಾಜ ಕಣವಿ ಸೇರಿದಂತೆ ಗ್ರಾಮದ ಹಿರಿಯರು, ಮಹಿಳೆಯರು, ಯುವಕರು ಉಪಸ್ಥಿತರಿದ್ದರು.

**ಬನ್ನಿಗೋಳ ಜಾಕ್‌ವಾಲ್ ಬಳಿ ಸ್ಯಾಂಡ್ ಬ್ಯಾಗ್ ಅಳವಡಿಕೆ; ಮೋಟಾರ್‌ಗಳು ಮರುಚೇತನ, ಜನರಿಗೆ ತಾತ್ಕಾಲಿಕ ನೆಮ್ಮದಿ!**

# ತುಂಗಭದ್ರಾ ಬರ ಸಂಕಷ್ಟಕ್ಕೆ ತುರ್ತು ಕ್ರಮ




**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತುಂಗಭದ್ರಾ ನದಿಯಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿದ ಪರಿಣಾಮ ಉಂಟಾಗಿದ್ದ ಕುಡಿಯುವ ನೀರಿನ ಸಂಕಷ್ಟಕ್ಕೆ ಅಧಿಕಾರಿಗಳು ತುರ್ತು ಕ್ರಮ ಕೈಗೊಂಡಿದ್ದು, ಬನ್ನಿಗೋಳ ಜಾಕ್‌ವಾಲ್ ಬಳಿ ಸ್ಯಾಂಡ್ ಬ್ಯಾಗ್‌ಗಳನ್ನು ಅಳವಡಿಸಿ ನೀರನ್ನು ತಡೆಯುವ ಮೂಲಕ ಸ್ಥಳೀಯ ಮಟ್ಟದಲ್ಲಿ ನೀರಿನ ಲಭ್ಯತೆ ಹೆಚ್ಚಿಸಲಾಗಿದೆ.

ಇತ್ತೀಚೆಗೆ "ಬರಿದಾದ ತುಂಗಭದ್ರಾ ನೀರಿಗಾಗಿ ಹಾಹಾಕಾರ" ಎಂಬ ಶೀರ್ಷಿಕೆಯಲ್ಲಿ ಪ್ರಕಟವಾದ ವಿಜಯ ಸಾಕ್ಷಿ ವರದಿಗೆ ಸ್ಪಂದನೆ ವ್ಯಕ್ತವಾಗಿದ್ದು, ಅಧಿಕಾರಿಗಳ ಈ ತ್ವರಿತ ಕ್ರಮವನ್ನು ಸ್ಥಳೀಯರು ವಿಜಯಸಾಕ್ಷಿ ಇಂಪ್ಯಾಕ್ಟ್ ಎಂದು ಪ್ರಶಂಸಿಸಿದ್ದಾರೆ. ತುಂಗಭದ್ರಾ ನದಿಯಲ್ಲಿ ನೀರಿನ ಮಟ್ಟ ಕುಸಿತದಿಂದ ಜಾಕ್‌ವಾಲ್‌ಗಳು ಕಾರ್ಯನಿರ್ವಹಿಸದೆ ಬನ್ನಿಗೋಳ ಸೇರಿದಂತೆ ಹಲವು ಗ್ರಾಮಗಳಲ್ಲಿ ಮೋಟಾರ್‌ಗಳು ಸ್ಥಗಿತಗೊಂಡಿದ್ದವು. ಹಗರಿಬೊಮ್ಮನಹಳ್ಳಿ ಪಟ್ಟಣದಲ್ಲಿಯೂ ಕುಡಿಯುವ ನೀರಿನ ತೀವ್ರ ಅಭಾವದಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದರು.

ಈ ತಾತ್ಕಾಲಿಕ ಕ್ರಮದಿಂದ ಕೆಲವೊಂದು ಭಾಗಗಳಲ್ಲಿ ನೀರಿನ ಸರಬರಾಜು ಪುನಃ ಆರಂಭಗೊಂಡಿದ್ದು, ಜನರಿಗೆ ಸ್ವಲ್ಪ ಮಟ್ಟಿನ ನೆಮ್ಮದಿ ದೊರೆತಿದೆ.

ಆದಾಗ್ಯೂ, ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಲು ಸ್ಥಳೀಯರು ಆಗ್ರಹ ವ್ಯಕ್ತಪಡಿಸಿದ್ದಾರೆ. ಸಿಗಟಲೂರು ಬ್ಯಾರೇಜ್‌ನಿಂದ ತುಂಗಭದ್ರಾ ನದಿಗೆ ತಕ್ಷಣ ನೀರು ಬಿಡುಗಡೆ ಮಾಡಬೇಕು ಹಾಗೂ ಹಗರಿಬೊಮ್ಮನಹಳ್ಳಿ ನಗರಕ್ಕೆ ನಿರಂತರ ಕುಡಿಯುವ ನೀರಿನ ಸರಬರಾಜು ವ್ಯವಸ್ಥೆ ಕಲ್ಪಿಸಬೇಕು ಎಂಬುದು ಪ್ರಮುಖ ಬೇಡಿಕೆಯಾಗಿದೆ.

ಜಿಲ್ಲಾಡಳಿತದ ತ್ವರಿತ ಕ್ರಮಕ್ಕೆ ಕೃತಜ್ಞತೆ ವ್ಯಕ್ತಪಡಿಸಿದ ಸ್ಥಳೀಯರು, ದೀರ್ಘಕಾಲಿಕ ಹಾಗೂ ಶಾಶ್ವತ ಪರಿಹಾರ ಒದಗಿಸುವಂತೆ ಒತ್ತಾಯಿಸಿದ್ದಾರೆ.

> "ತಾತ್ಕಾಲಿಕ ಕ್ರಮದಿಂದ ಸ್ವಲ್ಪ ಪರಿಹಾರ ದೊರೆತಿದೆ. ಆದರೆ ಮುಂದಿನ ದಿನಗಳಲ್ಲಿ ಇಂತಹ ಸಮಸ್ಯೆ ಮರುಕಳಿಸದಂತೆ ಶಾಶ್ವತ ಪರಿಹಾರ ಅಗತ್ಯವಾಗಿದೆ."
>
> **– ಸ್ಥಳೀಯರು**

> "ಬನ್ನಿಗೋಳ ಜಾಕ್‌ವಾಲ್ ಬಳಿ ಸ್ಯಾಂಡ್ ಬ್ಯಾಗ್‌ಗಳನ್ನು ಅಳವಡಿಸಿ ನೀರನ್ನು ತಡೆದು ಸ್ಥಳೀಯ ಮಟ್ಟದಲ್ಲಿ ನೀರಿನ ಲಭ್ಯತೆ ಹೆಚ್ಚಿಸಲಾಗಿದೆ. ಇದರಿಂದ ಕೆಲವು ಪ್ರದೇಶಗಳಲ್ಲಿ ಮೋಟಾರ್‌ಗಳು ಮರುಪ್ರಾರಂಭಗೊಂಡಿವೆ."
>
> **– ಮುಗಳಿ, ಮುಖ್ಯಾಧಿಕಾರಿ.**

**ಎಪ್ರಿಲ್ 30ರಿಂದ ಮೇ 13ರವರೆಗೆ ನಿಷೇಧಾಜ್ಞೆ ಜಾರಿ | ನಕಲು ತಡೆಗೆ ಕಟ್ಟುನಿಟ್ಟಿನ ಕ್ರಮ**

## ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2026ರ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆ-2 ಅನ್ನು ಎಪ್ರಿಲ್ 30ರಿಂದ ಮೇ 13ರವರೆಗೆ ನಡೆಸಲಿದೆ. ಪರೀಕ್ಷೆಗಳು ಪ್ರತಿದಿನ ಬೆಳಿಗ್ಗೆ 10:15ರಿಂದ ಸಂಜೆ 4:15ರವರೆಗೆ ನಡೆಯಲಿವೆ.

ಪರೀಕ್ಷೆಯಲ್ಲಿ ನಕಲು, ಅವ್ಯವಹಾರ ತಡೆಯಲು ಹಾಗೂ ಶಾಂತಿ-ಸುವ್ಯವಸ್ಥೆ ಕಾಪಾಡಲು ಜಿಲ್ಲೆಯ 7 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ. ಈ ಅವಧಿಯಲ್ಲಿ ಬೆಳಿಗ್ಗೆ 8ರಿಂದ ಸಂಜೆ 5:30ರವರೆಗೆ ಪ್ರತಿಬಂಧಕಾಜ್ಞೆ ಜಾರಿಯಲ್ಲಿರಲಿದೆ. ಪರೀಕ್ಷಾರ್ಥಿಗಳು ಮತ್ತು ಸಿಬ್ಬಂದಿಯನ್ನು ಹೊರತುಪಡಿಸಿ ಇತರರಿಗೆ ಪ್ರವೇಶ ನಿರ್ಬಂಧಿಸಲಾಗಿದೆ. ಐದು ಜನಕ್ಕಿಂತ ಹೆಚ್ಚು ಜನರು ಗುಂಪು ಸೇರುವುದನ್ನು ನಿಷೇಧಿಸಲಾಗಿದೆ. ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಲಾಗಿದೆ.

ಪರೀಕ್ಷಾ ಅವಧಿಯಲ್ಲಿ ಧ್ವನಿವರ್ಧಕಗಳ ಬಳಕೆ ನಿಷೇಧವಾಗಿದ್ದು, ಮಾಧ್ಯಮಗಳಿಗೆ ಪರೀಕ್ಷಾ ಕೇಂದ್ರಗಳ ಹೊರಭಾಗದಲ್ಲಿ ಮಾತ್ರ ಚಿತ್ರೀಕರಣಕ್ಕೆ ಅವಕಾಶ ನೀಡಲಾಗಿದೆ. ಪರೀಕ್ಷಾ ಕೊಠಡಿಗಳಿಗೆ ಪ್ರವೇಶ ಮತ್ತು ಚಿತ್ರೀಕರಣ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಪರೀಕ್ಷಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಮೊಬೈಲ್ ಫೋನ್ ಸೇರಿದಂತೆ ಯಾವುದೇ ಸಂಪರ್ಕ ಸಾಧನಗಳನ್ನು ತರಲು ಅಥವಾ ಬಳಸಲು ಅವಕಾಶವಿಲ್ಲ. ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬೇಡಿಕೆ ಈಡೇರದಿದ್ದರೆ ಗೋಕಾಕ ಚಳುವಳಿ ಮಾದರಿಯಲ್ಲಿ ಹೋರಾಟ – ಮೇ 2ರಂದು ಹುಬ್ಬಳ್ಳಿಯಲ್ಲಿ ಮಹತ್ವದ ಸಭೆ**

## ವಿಮಾನ ನಿಲ್ದಾಣಗಳಿಗೆ ಕನ್ನಡ ಮಹನೀಯರ ಹೆಸರಿಡಿ




> "ಕನ್ನಡ ಮಹನೀಯರ ಹೆಸರನ್ನು ವಿಮಾನ ನಿಲ್ದಾಣಗಳಿಗೆ ಇಡುವ ಬೇಡಿಕೆಗೆ ಸ್ಪಂದನೆ ಸಿಗದಿದ್ದರೆ, ಗೋಕಾಕ ಚಳುವಳಿ ಮಾದರಿಯಲ್ಲಿ ಹೋರಾಟ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತದೆ."
>
> **– ಶಿವಾನಂದ ಮುತ್ತಣ್ಣವರ, ಹೋರಾಟಗಾರ.**

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯದ ಪ್ರಮುಖ ವಿಮಾನ ನಿಲ್ದಾಣಗಳಿಗೆ ಕನ್ನಡ ನಾಡು-ನುಡಿಗಾಗಿ ಹೋರಾಟ ಮಾಡಿದ ಮಹನೀಯರ ಹೆಸರನ್ನು ಇಡುವ ಮೂಲಕ ಅವರಿಗೆ ಮಹೋನ್ನತ ಗೌರವ ಸಲ್ಲಿಸಬೇಕು ಎಂಬ ಬೇಡಿಕೆಗೆ ಸರ್ಕಾರ ಕೂಡಲೇ ಮಾನ್ಯತೆ ನೀಡಬೇಕು ಎಂದು ಹುಬ್ಬಳ್ಳಿಯ ಹೋರಾಟಗಾರ ಶಿವಾನಂದ ಮುತ್ತಣ್ಣವರ ಆಗ್ರಹಿಸಿದರು.


ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯಾಲಯದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಬ್ರಿಟಿಷರ ವಿರುದ್ಧ ಕೆಚ್ಚಿನಿಂದ ಹೋರಾಡಿದ ಪ್ರಥಮ ಸ್ವಾತಂತ್ರ್ಯ ಹೋರಾಟಗಾರ್ತಿ ವೀರರಾಣಿ ಕಿತ್ತೂರು ಚನ್ನಮ್ಮ ಅವರ ಹೆಸರನ್ನು ಬೆಳಗಾವಿ ವಿಮಾನ ನಿಲ್ದಾಣಕ್ಕೆ, ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ವಿಜಯಪುರ ವಿಮಾನ ನಿಲ್ದಾಣಕ್ಕೆ ಜಗಜ್ಯೋತಿ ಬಸವಣ್ಣ, ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ರಾಷ್ಟ್ರಕವಿ ಕುವೆಂಪು ಹಾಗೂ ಟರ್ಮಿನಲ್-2ಕ್ಕೆ ದಿ. ಡಾ. ರಾಜಕುಮಾರ ಅವರ ಹೆಸರನ್ನು ಇಡಬೇಕು ಎಂದು ಹಲವು ಬಾರಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಮನವಿ ಸಲ್ಲಿಸಿದ್ದೇವೆ. ಆದರೆ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಇದು ಸರ್ಕಾರದ ನಿರ್ಲಕ್ಷ್ಯವೋ, ಅಸಡ್ಡೆಯೋ ತಿಳಿದು ಬರುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಧೋರಣೆ ಮುಂದುವರೆದರೆ ಮುಂದಿನ ದಿನಗಳಲ್ಲಿ ಗೋಕಾಕ ಚಳುವಳಿ ಮಾದರಿಯಲ್ಲಿ ಹೋರಾಟ ಹಮ್ಮಿಕೊಳ್ಳಲಾಗುವುದು. ಹೋರಾಟದ ರೂಪುರೇಷೆ ಕುರಿತು ಚರ್ಚಿಸಲು ಮೇ 2ರಂದು ಹುಬ್ಬಳ್ಳಿಯ ಕ್ಯೂಬೆಕ್ಸ್ ಹೋಟೆಲ್‌ನಲ್ಲಿ ಬೆಳಿಗ್ಗೆ 10 ಗಂಟೆಗೆ ಸಭೆ ಕರೆಯಲಾಗಿದೆ. ಉತ್ತರ ಕರ್ನಾಟಕದ ಎಲ್ಲ ಜಿಲ್ಲೆಗಳ ಕನ್ನಡಾಭಿಮಾನಿಗಳು ಹಾಗೂ ಕನ್ನಡಪರ ಹೋರಾಟಗಾರರು ಸ'ಭ'ಂ'ು'ಲ್ಲಿ

▸▸ 4ನೇ ಪುಟಕ್ಕೆ

**ಗದಗ ಜಿಲ್ಲೆಗೆ ಹೆಮ್ಮೆ ತಂದ ಎಸ್‌ಎಸ್‌ಎಲ್‌ಸಿ, ಪಿಯುಸಿ ಫಲಿತಾಂಶ- ಸಂಕನೂರ**

# ಒಗ್ಗಟ್ಟಿನ ಪ್ರಯತ್ನಕ್ಕೆ ದೊರೆತ ಐತಿಹಾಸಿಕ ಜಯ



**■ವಿಜಯಸಾಕ್ಷಿ ಸುದ್ದಿ, ಗದಗ**

2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶ ರಾಜ್ಯದ ಇತಿಹಾಸದಲ್ಲಿ ದಾಖಲೆಯಾಗಿದ್ದು, ಇದರ ಹಿಂದೆ ವಿದ್ಯಾರ್ಥಿಗಳು, ಶಿಕ್ಷಕರು, ಪಾಲಕರು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳ ಪರಿಶ್ರಮವೇ ಪ್ರಮುಖ ಕಾರಣ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳ ಶಿಕ್ಷಕರ ಸಂಘಟನೆಗಳು ಹಾಗೂ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ. 95.24 ಆಗಿದ್ದು, ರಾಜ್ಯದ ಸರಾಸರಿಗಿಂತ ಹೆಚ್ಚು ಸಾಧನೆಯಾಗಿರುವುದು ಹೆಮ್ಮೆಯ ವಿಷಯವಾಗಿದೆ. ಪಿಯುಸಿ ಫಲಿತಾಂಶವೂ ಶೇ. 76.65 ಆಗಿದ್ದು, ಕಳೆದ ವರ್ಷಕ್ಕಿಂತ ಶೇಕಡಾ 10ರಷ್ಟು ಹೆಚ್ಚಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಮೂರು ಸರಣಿ ಪರೀಕ್ಷೆಗಳು, ಚಿಕಿತ್ಸಾ ಬೋಧನಾ ವಿಧಾನ, ಘಟಕ ಪರೀಕ್ಷೆಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳ 29 ಅಂಶಗಳ ಕಾರ್ಯಕ್ರಮಗಳ ಅನುಷ್ಠಾನದಿಂದ ಉತ್ತಮ ಫಲಿತಾಂಶ ಸಾಧ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಸ್. ಸಿರ್ಸಿ, ಉಪನ್ಯಾಸಕ ಶ್ರೀಶೈಲ ಬೀರಕಬ್ಬಿ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಫ್. ಪೂಜಾರ, ಜಿಲ್ಲಾ ನಗರ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಶರಣಪ್ಪ ನಾಗರಳ್ಳಿ, ಪ್ರಾಚಾರ್ಯ ಐ.ಬಿ. ಹಾದಿಮನಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಮ್. ಹಿರೇಮಠ ಸೇರಿದಂತೆ ಹಲವರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಇತ್ತೀಚೆಗೆ ಪಿ.ಎಚ್.ಡಿ ಪಡೆದವರನ್ನು ಸನ್ಮಾನಿಸಲು ಮುಂಬರುವ ನೀಟ್ ಪರೀಕ್ಷೆಯ ನಂತರ ಜಿಲ್ಲಾ ಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಪ್ರಾಚಾರ್ಯ ಅಶೋಕ ಅಂಗಡಿ ಸ್ವಾಗತಿಸಿದರು. ಉಪನ್ಯಾಸಕ ಎಸ್.ಐ. ಮೇಟಿ ವಂದನಾರ್ಪಣೆ ಮಾಡಿದರು.

ಉತ್ತಮ ಫಲಿತಾಂಶ ತರುವಲ್ಲಿ ಶ್ರಮಿಸಿದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಸ್. ಸಿರ್ಸಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡವಿನಮನಿ ಅವರನ್ನು ಸನ್ಮಾನಿಸಲಾಯಿತು.

# ಗದಗದಲ್ಲಿ ಕೈಮಗ್ಗ ತಂತ್ರಜ್ಞಾನಕ್ಕೆ ಹೊಸ ಬೆಳಕು

## ಯುವಕರ ಭವಿಷ್ಯ ರೂಪಿಸುತ್ತಿರುವ ಪ್ರತಿಷ್ಠಿತ ಸಂಸ್ಥೆ – ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ




> "ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ಗ್ರಾಮೀಣ ಹಾಗೂ ನಗರ ಭಾಗದ ಯುವಕರಿಗೆ ತಾಂತ್ರಿಕ ಶಿಕ್ಷಣ ನೀಡುವ ಮೂಲಕ ಪಾರಂಪರಿಕ ಕಲೆ ಮತ್ತು ಆಧುನಿಕ ತಂತ್ರಜ್ಞಾನವನ್ನು ಸಂಯೋಜಿಸುತ್ತದೆ. ವಿದ್ಯಾರ್ಥಿಗಳನ್ನು ಉದ್ಯೋಗಮುಖಿ ಮತ್ತು ಸ್ವಾವಲಂಬಿಗಳನ್ನಾಗಿ ರೂಪಿಸುವುದು ನಮ್ಮ ಧ್ಯೇಯವಾಗಿದೆ."
>
> **– ಶ್ರೀಮತಿ ಸುಮಲತಾ ಎಸ್.,** ಪ್ರಾಚಾರ್ಯರು.

### ಸಂಪರ್ಕ ವಿವರಗಳು

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ

ಮೊಬೈಲ್: 9916143619

ದೂರವಾಣಿ: 08372-259664

ಇ-ಮೇಲ್: principalkhtigadag@gmail.com

ವೆಬ್‌ಸೈಟ್: khtigadag.ac.in

### ಪ್ರಮುಖಾಂಶಗಳು

* 1994ರಲ್ಲಿ ಸ್ಥಾಪಿತ ಪ್ರತಿಷ್ಠಿತ ಸಂಸ್ಥೆ
* 3 ವರ್ಷದ ಡಿಪ್ಲೋಮಾ ಕೋರ್ಸ್
* ಭಾರತ ಸರ್ಕಾರದ ಮಾನ್ಯತೆ
* ದೇಶದ 11 ಪ್ರಮುಖ ಸಂಸ್ಥೆಗಳ ಪೈಕಿ ಒಂದು
* 8.3 ಎಕರೆ ವ್ಯಾಪ್ತಿಯ ಆವರಣ
* ಆಧುನಿಕ ಲ್ಯಾಬ್‌ಗಳು ಹಾಗೂ ಸ್ಮಾರ್ಟ್ ಕ್ಲಾಸ್‌ರೂಂ
* ತಿಂಗಳಿಗೆ 2,500 ಶಿಷ್ಯವೇತನ
* ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ವಿದ್ಯಾರ್ಥಿಗಳಿಗೆ ಅವಕಾಶ
* ಉದ್ಯೋಗಾವಕಾಶಗಳಿಗೆ ಭದ್ರ ನೆಲ



ಗದಗದ ಹೆಮ್ಮೆ: ಪರಂಪರೆಗೂ ತಂತ್ರಜ್ಞಾನಕ್ಕೂ ಸೇತುವೆ ಪಾರಂಪರಿಕ ಕೈಮಗ್ಗ ಕಲೆಗೂ ಆಧುನಿಕ ತಂತ್ರಜ್ಞಾನಕ್ಕೂ ಸೇತುವೆಯಾಗಿರುವ ಗದಗ-ಬೆಟಗೇರಿ ಸಮೀಪದ ನರಸಾಪೂರ ಗ್ರಾಮದಲ್ಲಿರುವ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಇಂದು ರಾಜ್ಯದ ಪ್ರಮುಖ ಶೈಕ್ಷಣಿಕ ಕೇಂದ್ರವಾಗಿ ಹೊರಹೊಮ್ಮಿದೆ.

1994ರಲ್ಲಿ ಸ್ಥಾಪನೆಯಾದ ಈ ಸಂಸ್ಥೆಯು ಮೂರು ವರ್ಷದ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನ ಡಿಪ್ಲೋಮಾ ಕೋರ್ಸ್‌ನ್ನು ನೀಡುತ್ತಿದ್ದು, ವಿದ್ಯಾರ್ಥಿಗಳಿಗೆ ತಾಂತ್ರಿಕ ಜ್ಞಾನ ಮತ್ತು ಕೈಚಳಕ ಎರಡನ್ನೂ ಸಮನ್ವಯಗೊಳಿಸುವ ವಿಶಿಷ್ಟ ಅವಕಾಶವನ್ನು ಒದಗಿಸುತ್ತಿದೆ.

**ರಾಷ್ಟ್ರೀಯ ಮಟ್ಟದ ಮಾನ್ಯತೆ – ಗುಣಮಟ್ಟದ ಶಿಕ್ಷಣ:** ಭಾರತ ಸರ್ಕಾರದ ಜವಳಿ ಮಂತ್ರಾಲಯದ ಅಭಿವೃದ್ಧಿ ಆಯುಕ್ತರಿಂದ ಮಾನ್ಯತೆ ಪಡೆದಿರುವ ಈ ಸಂಸ್ಥೆ, ನವದೆಹಲಿಯ ಮಾರ್ಗಸೂಚಿಗಳ ಪ್ರಕಾರ ಪಠ್ಯಕ್ರಮ ಮತ್ತು ಪರೀಕ್ಷಾ ಪದ್ಧತಿಯನ್ನು ಅನುಸರಿಸುತ್ತಿದೆ. ದೇಶದಾದ್ಯಂತ ಇಂತಹ ಮಾದರಿಯ ಒಟ್ಟು 11 ಸಂಸ್ಥೆಗಳ ಪೈಕಿ ಗದಗದ ಈ ಸಂಸ್ಥೆ ತನ್ನ ಗುಣಮಟ್ಟದ ಶಿಕ್ಷಣದಿಂದ ವಿಶಿಷ್ಟ ಗುರುತನ್ನು ಪಡೆದಿದೆ.

ಸೇಲಂ, ವಾರಾಣಸಿ, ಜೋಧಪುರ, ಗೌಹಾತಿ, ಕಣ್ಣೂರ ಮೊದಲಾದ ನಗರಗಳ ಸಾಲಿನಲ್ಲಿ ಗದಗ ಸಂಸ್ಥೆಯೂ ತನ್ನ ಸ್ಥಾನವನ್ನು ಗಟ್ಟಿ ಮಾಡಿಕೊಂಡಿದೆ.

**ಆಧುನಿಕ ಸೌಲಭ್ಯಗಳೊಂದಿಗೆ ಸಂಪೂರ್ಣ ತರಬೇತಿ:** ನರಸಾಪೂರದಲ್ಲಿ 8.3 ಎಕರೆ ವ್ಯಾಪ್ತಿಯ ವಿಶಾಲ ಸ್ವಂತ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಸಂಸ್ಥೆ, ವಿದ್ಯಾರ್ಥಿಗಳಿಗೆ ಸಮಗ್ರ ಸೌಲಭ್ಯಗಳನ್ನು ಒದಗಿಸುತ್ತಿದೆ.

ಡೈಯಿಂಗ್ ಮತ್ತು ಪ್ರಿಂಟಿಂಗ್, ಟೆಸ್ಟಿಂಗ್, ಕೈಮಗ್ಗ ಹಾಗೂ ವಿದ್ಯುತ್ ಮಗ್ಗ, ಜಕಾರ್ಡ್ ಮತ್ತು ಕಂಪ್ಯೂಟರ್ ಆಧಾರಿತ ಟೆಕ್ಸ್ಟೈಲ್ ಡಿಸೈನಿಂಗ್ (ಅಂಖಿಅ) ಲ್ಯಾಬ್‌ಗಳು ವಿದ್ಯಾರ್ಥಿಗಳ ಪ್ರಾಯೋಗಿಕ ಜ್ಞಾನವನ್ನು ವೃದ್ಧಿಸುತ್ತಿವೆ.

ಸ್ಮಾರ್ಟ್ ಕ್ಲಾಸ್‌ರೂಂ, ಇ-ಗ್ರಂಥಾಲಯ ಹಾಗೂ ಸಮೃದ್ಧ ಗ್ರಂಥಾಲಯ ವ್ಯವಸ್ಥೆಗಳು ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುತ್ತಿವೆ.

**ವಸತಿ, ಶಿಷ್ಯವೇತನ – ವಿದ್ಯಾರ್ಥಿ ಕೇಂದ್ರಿತ ವ್ಯವಸ್ಥೆ:** ಪುರುಷ ವಿದ್ಯಾರ್ಥಿಗಳಿಗೆ ವಸತಿ ನಿಲಯ ಸೌಲಭ್ಯ, ಶುದ್ಧ ಕುಡಿಯುವ ನೀರು ಮತ್ತು ಬಿಸಿ ನೀರಿಗೆ ಸೋಲಾರ್ ವ್ಯವಸ್ಥೆ ಕಲ್ಪಿಸಲಾಗಿದೆ. ವಿದ್ಯಾರ್ಥಿನಿಯರಿಗೆ ಸರ್ಕಾರಿ ವಸತಿ ನಿಲಯಗಳಲ್ಲಿ ವಸತಿ ವ್ಯವಸ್ಥೆ ಒದಗಿಸಲಾಗುತ್ತದೆ.

ಅನುಭವೀ ಬೋಧಕರಿಂದ ತರಬೇತಿ ನೀಡಲಾಗುತ್ತಿದ್ದು, ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ವಿಶೇಷ ಒತ್ತು ನೀಡಲಾಗುತ್ತದೆ.

ಪ್ರತಿ ವಿದ್ಯಾರ್ಥಿಗೂ ತಿಂಗಳಿಗೆ ರೂ. 2,500 ಶಿಷ್ಯವೇತನ ನೀಡಲಾಗುವುದು ಎಂಬುದು ಈ ಸಂಸ್ಥೆಯ ಪ್ರಮುಖ ವಿಶೇಷತೆ.

**ಪ್ರವೇಶ ವಿವರಗಳು:** ಪ್ರತಿ ವರ್ಷ ಪ್ರಥಮ ವರ್ಷದ ಪ್ರವೇಶ ಹಾಗೂ ಲ್ಯಾಟರಲ್ ಎಂಟ್ರಿ ಮೂಲಕ ಮೂರನೇ ಸೆಮಿಸ್ಟರ್‌ಗೆ ಅರ್ಜಿ ಆಹ್ವಾನಿಸಲಾಗುತ್ತದೆ.

**ಪ್ರಥಮ ವರ್ಷ ಪ್ರವೇಶ:** ಎಸ್‌ಎಸ್‌ಎಲ್‌ಸಿ ಉತ್ತೀರ್ಣ (ಇಂಗ್ಲಿಷ್ ಕಡ್ಡಾಯ)

**ವಯೋಮಿತಿ:** ಸಾಮಾನ್ಯ ವರ್ಗ 15-23 ವರ್ಷ, ಎಸ್‌ಸಿ/ಎಸ್‌ಟಿ 15-25 ವರ್ಷ

**ಲ್ಯಾಟರಲ್ ಎಂಟ್ರಿ:** ಪಿಯುಸಿ (ವಿಜ್ಞಾನ), ಐಟಿಐ ಅಥವಾ ಸಂಬಂಧಿತ ವೃತ್ತಿಪರ ಕೋರ್ಸ್

**ವಯೋಮಿತಿ:** ಸಾಮಾನ್ಯ ವರ್ಗ 25 ವರ್ಷ, ಎಸ್‌ಸಿ/ಎಸ್‌ಟಿ 27 ವರ್ಷ

**ಉದ್ಯೋಗಾವಕಾಶಗಳಿಗೆ ಭದ್ರ ನೆಲೆ:** ಈ ಸಂಸ್ಥೆಯಲ್ಲಿ 2008ರಿಂದ ಕಲಿತ 23 ವಿದ್ಯಾರ್ಥಿಗಳು ರಾಜ್ಯದ ವಿವಿಧ ಜಿಲ್ಲೆಗಳ ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವುದು ಸಂಸ್ಥೆಯ ಗುಣಮಟ್ಟಕ್ಕೆ ಸಾಕ್ಷಿಯಾಗಿದೆ.

ಕೈಮಗ್ಗ ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಹೊಂದಿದ ಯುವಕರಿಗೆ ಈ ಸಂಸ್ಥೆ ಭವಿಷ್ಯದ ಭರವಸೆಯ ದಾರಿಯಾಗಿ ಪರಿಣಮಿಸಿದೆ.

**–ವಸಂತ ಬಿ. ಮಡ್ಲೂರ,**
ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ.

# ಮಕ್ಕಳು ಮೊಬೈಲ್, ಟಿವಿಗಳಿಂದ ದೂರವಿರಬೇಕು

## ಜಿಲ್ಲಾಮಟ್ಟದ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿದ ಸಿ. ಎಸ್. ಶಿವನಗೌಡರ



> "ಶಾಲೆ ಮತ್ತು ಶಿಬಿರಗಳ ನಡುವೆ ವ್ಯತ್ಯಾಸವಿದೆ; ಮಕ್ಕಳಿಗೆ ಕೇವಲ ವಿದ್ಯೆ ಮಾತ್ರವಲ್ಲ, ಸಂಸ್ಕಾರವೂ ಸಮಾನವಾಗಿ ಅಗತ್ಯ."
>
> **– ಎಸ್. ಪಿ. ಪ್ರಭಯ್ಯನಮಠ,** ಪ್ರಭಾರ ಬಿಇಒ.

**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳು ಮೊಬೈಲ್‌ನಲ್ಲಿ ಹೆಚ್ಚು ಸಮಯ ಕಳೆಯುವುದರಿಂದ ಅವರಲ್ಲಿ ಮಾನಸಿಕ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದು ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ. ಎಸ್. ಶಿವನಗೌಡರ ಹೇಳಿದರು.

ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 10ರಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸಮಿತಿ ಇವರ ಸಹಯೋಗದಲ್ಲಿ ನಡೆದ ಜಿಲ್ಲಾಮಟ್ಟದ ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದಿನ ದಿನಗಳಲ್ಲಿ ಮಕ್ಕಳು ಪ್ರಕೃತಿಯಲ್ಲಿ ಬೆರೆತು ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಆರೋಗ್ಯಕರ ಜೀವನ ನಡೆಸುತ್ತಿದ್ದರು. ಆದರೆ ಇಂದಿನ ದಿನಗಳಲ್ಲಿ ಟಿವಿ ಮತ್ತು ಮೊಬೈಲ್‌ಗಳ ಬಳಕೆ ಹೆಚ್ಚಾದ ಪರಿಣಾಮ ಮಕ್ಕಳಲ್ಲಿ ಖಿನ್ನತೆ ಸೇರಿದಂತೆ ಹಲವು ಸಮಸ್ಯೆಗಳು ಕಾಣಿಸುತ್ತಿವೆ ಎಂದು ಹೇಳಿದರು. ಓದಿನ ಜೊತೆಗೆ ತಮ್ಮ ಆಸಕ್ತಿಯ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡು ಮನಸ್ಸು ಮತ್ತು ಆರೋಗ್ಯವನ್ನು ಸದೃಢವಾಗಿಟ್ಟುಕೊಳ್ಳಬೇಕು ಹಾಗೂ ಮನೆಯ ಕೆಲಸಗಳಲ್ಲಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರ ಮಾತನಾಡಿ, ಬೇಸಿಗೆ ಶಿಬಿರದ ಮಹತ್ವವನ್ನು ಮಕ್ಕಳು ಅರಿತುಕೊಳ್ಳಬೇಕು. ರೈನ್ ಡ್ಯಾನ್ಸ್, ದೇಸಿ ಆಟಗಳು, ಮಣ್ಣಿನ ಆಟಗಳು, ತಾರಾಲಯ ವೀಕ್ಷಣೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಜಯಶ್ರೀ ಆರ್. ಮಾತನಾಡಿ, 5 ರಿಂದ 16 ವರ್ಷಗಳ ಮಕ್ಕಳಿಗೆ 15 ದಿನಗಳ ಕಾಲ ವಿವಿಧ ಚಟುವಟಿಕೆಗಳೊಂದಿಗೆ ಮನೋವಿಕಾಸ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅವರ ಪ್ರತಿಭೆಗಳನ್ನು ಗುರುತಿಸಲಾಗುತ್ತಿದೆ ಎಂದು ತಿಳಿಸಿದರು.

ಮಕ್ಕಳ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ. ರಾಜೇಂದ್ರ ಗಡಾದ ಮಾತನಾಡಿ, ಬೇಸಿಗೆ ಶಿಬಿರವು ಮಕ್ಕಳಲ್ಲಿರುವ ಪ್ರತಿಭೆಗಳನ್ನು ಹೊರತೆಗೆಯುವ ವೇದಿಕೆಯಾಗಿದೆ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷಕಿ ಲಕ್ಷ್ಮಿ ಜಿಂಗಿ ಅವರು ಶಿಬಿರವು ಮಕ್ಕಳ ಆತ್ಮವಿಶ್ವಾಸ, ಜೀವನ ಕೌಶಲ್ಯ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಕಾರಿ ಎಂದು ಹೇಳಿದರು.

ಶಿಬಿರದಲ್ಲಿ ಸಂಗೀತ, ಯೋಗ, ಕರಾಟೆ, ಜ್ಯುವೆಲ್ಲರಿ, ಮೆಹಂದಿ, ಚಿತ್ರಕಲೆ ಮತ್ತು ಕರಕುಶಲ ತರಬೇತಿಗಳನ್ನು ನೀಡಲಾಗುತ್ತಿದೆ. ಕಾರ್ಯಕ್ರಮವನ್ನು ರವಿ ಉಮಚಗಿ ನಿರೂಪಿಸಿದರು.

# ಪ್ರತಿಯೊಂದು ಕೆಲಸವನ್ನೂ ಪೂಜೆಯಂತೆ ಕಾಣಬೇಕು

## "ಕಾಯಕವೇ ಕೈಲಾಸ" ತತ್ವ ಜೀವನದ ಮಾರ್ಗದರ್ಶಿ: ಮಾಹಾಂತೇಶ ಮಮದಾಪೂರ



> "ಪ್ರತಿಯೊಂದು ಕೆಲಸವನ್ನೂ ಪೂಜೆಯಂತೆ ಕಾಣುವ ಮನೋಭಾವವೇ ಜೀವನ ಸಾರ್ಥಕತೆಯ ಮೂಲ."
>
> **– ಮಾಹಾಂತೇಶ ಮಮದಾಪೂರ**

**■ವಿಜಯಸಾಕ್ಷಿ ಸುದ್ದಿ, ಬಾದಾಮಿ**

ಬಸವ ಜಯಂತಿ ಅಂಗವಾಗಿ ಹೊಳೆಆಲೂರಿನ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯ ವತಿಯಿಂದ ಬಸವ ಕಾವ್ಯ ಸಮ್ಮೇಳನ ಹಾಗೂ ವಿವಿಧ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಎಸ್.ಎಸ್.ಬಿ.ಎಂ. ಕಾಲೇಜಿನ ಸ್ಪರ್ಧಾ ಶಕ್ತಿ ಕೇಂದ್ರದಲ್ಲಿ ವಿಜೃಂಭಣೆಯಿಂದ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮಕ್ಕೆ ನವಗ್ರಹ ಹಿರೇಮಠದ ಪೂಜ್ಯ ಶ್ರೀ ಷ.ಬ್ರ. ಶಿವಪೂಜಾ ಶಿವಸಚ್ಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಮಾಹಾಂತೇಶ ಮಮದಾಪೂರ, ಬಸವಣ್ಣನವರ "ಕಾಯಕವೇ ಕೈಲಾಸ" ತತ್ವವು ಶ್ರಮದ ಮಹತ್ವವನ್ನು ಸಾರುತ್ತದೆ. ಪ್ರತಿಯೊಂದು ಕೆಲಸವನ್ನೂ ಪೂಜೆಯಂತೆ ಕಾಣುವ ಮನೋಭಾವ ಬೆಳೆಸಿಕೊಳ್ಳುವುದು ಜೀವನ ಸಾರ್ಥಕತೆಯ ಮೂಲವಾಗಿದೆ ಎಂದು ಹೇಳಿದರು. ಸಮಾಜ ಸೇವಕರನ್ನು ಗೌರವಿಸುವ ಮೂಲಕ ಇತರರಿಗೆ ಪ್ರೇರಣೆ ನೀಡುವ ಕಾರ್ಯ ನಡೆಯುತ್ತಿದೆ ಎಂದರು.

ಬಸವ ಕಾವ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದ ಶರಣಮ್ಮ ಗದ್ದಿಗಿಮಠ ಮಾತನಾಡಿ, ಇದು ಕೇವಲ ಸಾಹಿತ್ಯ ಕಾರ್ಯಕ್ರಮವಲ್ಲ, ಚಿಂತನೆಯ ಹಬ್ಬವಾಗಿದೆ. ಬಸವಣ್ಣನವರ ವಚನಗಳು ಸಮಾನತೆ, ಸತ್ಯ ಮತ್ತು ಮಾನವೀಯ ಮೌಲ್ಯಗಳ ಪ್ರಸಾರಕ್ಕೆ ಮಾರ್ಗದರ್ಶಕವಾಗಿವೆ ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಶೋಭಾ ಎಸ್. ಆಡಿನ ವಹಿಸಿದ್ದರು. ಎಸ್.ಎಸ್.ಬಿ.ಎಂ. ಕಾಲೇಜಿನ ಮೇಲ್ವಿಚಾರಣಾ ಸಮಿತಿ ನಿರ್ದೇಶಕಿ ಶ್ರೀಮತಿ ಶಾರದಾ ಹೆಚ್. ಮೇಟಿ ಅವರು ಪುರಸ್ಕೃತರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಕಾರ್ಯಕ್ರಮದಲ್ಲಿ ಶೇಖರಗೌಡ ವಿ. ಪಾಟೀಲ, ಡಾ. ಎ.ಎ. ತೋಪಕಟ್ಟಿ, ವಿಜಯಕುಮಾರ ನಾಯಕ, ಸಿ.ಪಿ.ಐ ರೋಣ, ನಿಂಗಪ್ಪ ನವಲಗುಂದ ಸೇರಿದಂತೆ ಅನೇಕ ಗಣ್ಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ವಸತಿ ಶಾಲಾ ವಿದ್ಯಾರ್ಥಿನಿಯ ಅಮೋಘ ಸಾಧನೆ

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 620 ಅಂಕ – ಜಿಲ್ಲೆಗೆ ತೃತೀಯ ಸ್ಥಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆಯ ಗಜೇಂದ್ರಗಡದ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿನಿ ಕುಮಾರಿ ಸುಷ್ಮಾ ತಾವರೇಪ್ಪ ನಾಯಕ ಅವರು 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ 625 ಅಂಕಗಳಿಗೆ 620 ಅಂಕಗಳನ್ನು ಗಳಿಸಿ ಶೇ. 99.20 ಸಾಧನೆ ಮಾಡಿ ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿನಿಯ ಈ ಸಾಧನೆ ವಸತಿ ಶಾಲೆಗೆ ಹಾಗೂ ಸಮಾಜ ಕಲ್ಯಾಣ ಇಲಾಖೆಗೆ ಕೀರ್ತಿ ತಂದಿದೆ.

"ಇಂತಹ ಸಾಧನೆಗಳು ಎಲ್ಲ ವಸತಿ ಶಾಲೆಗಳಲ್ಲಿ ಮುಂದುವರೆಯಲಿ" ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಹೇಳಿದರು.

ವಿದ್ಯಾರ್ಥಿನಿಯ ಸಾಧನೆಗೆ ಹರ್ಷ ವ್ಯಕ್ತಪಡಿಸಿದ ಅವರು ಸುಷ್ಮಾ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ, ಕಿತ್ತೂರು ರಾಣಿ ಚನ್ನಮ್ಮ ವಸತಿ ನಿಲಯದ ಪ್ರಾಂಶುಪಾಲ ಶರಣಪ್ಪ ಕರ್ಜಗಿ ಹಾಗೂ ವಿದ್ಯಾರ್ಥಿನಿಯ ಪಾಲಕರು ಉಪಸ್ಥಿತರಿದ್ದರು.

# ಗುರು ಸ್ಮರಣೆ – ಜೀವನದ ಬೆಳಕು

## ಕಣ್ಣೀರಿನ ನೆನಪುಗಳಲ್ಲಿ ಅರಳಿದ ಗುರುವಂದನೆ । ಹಳೆಯ ವಿದ್ಯಾರ್ಥಿನಿಯರಿಂದ ಭಾವಪೂರ್ಣ ಗೌರವ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗುರು-ಶಿಷ್ಯರ ಅನನ್ಯ ಬಾಂಧವ್ಯ, ಕೃತಜ್ಞತೆಯ ಕಣ್ಣೀರು ಮತ್ತು ನೆನಪುಗಳ ಹೊನಲು ಒಂದೇ ವೇದಿಕೆಯಲ್ಲಿ ಮೂಡಿಬಂದ ಕ್ಷಣಗಳಿಗೆ ಪಟ್ಟಣದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪ ಸಾಕ್ಷಿಯಾಯಿತು. ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ 2005 ಹಾಗೂ 2006ನೇ ಸಾಲಿನ ಹಳೆಯ ವಿದ್ಯಾರ್ಥಿನಿಯರು "ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ" ಕಾರ್ಯಕ್ರಮವನ್ನು ಆಯೋಜಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಜಿ.ಕೆ. ಕಾಳೆ ಮಾತನಾಡಿ, ಗುರುಗಳನ್ನು ಸ್ಮರಿಸುವುದು ಜೀವನದ ಮೌಲ್ಯಗಳನ್ನು ನೆನಪಿಸಿಕೊಳ್ಳುವುದೇ ಆಗಿದ್ದು, ಅವರ ಸ್ಮರಣೆ ನಮ್ಮನ್ನು ಸದ್ಗತಿಯತ್ತ ಕೊಂಡೊಯ್ಯುತ್ತದೆ ಎಂದು ಹೇಳಿದರು. ಇಂತಹ ಕಾರ್ಯಕ್ರಮಗಳು ಗುರು-ಶಿಷ್ಯರ ಬಾಂಧವ್ಯವನ್ನು ಜೀವಂತವಾಗಿಡುವ ಸೇತುವೆಗಳಾಗಿವೆ ಎಂದರು.

ಇನ್ನೊಬ್ಬ ಮುಖ್ಯ ಅತಿಥಿ ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿಯಡಿ ನಡೆಯುತ್ತಿರುವ ಶಾಲೆ ಭಾಗದ ಪ್ರಮುಖ ವಿದ್ಯಾಸಂಸ್ಥೆಯಾಗಿದ್ದು, ಶಿಕ್ಷಕರು ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣದಲ್ಲಿ ಮಹತ್ವದ ಪಾತ್ರವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿನಿಯರು ತಮ್ಮ ಗುರುಗಳಿಗೆ ಪುಷ್ಪವೃಷ್ಟಿ ಮಾಡಿ ಸನ್ಮಾನಿಸಿದರು. ಹಲವು ವರ್ಷಗಳ ನಂತರ ಗುರುಗಳನ್ನು ಭೇಟಿಯಾದ ವಿದ್ಯಾರ್ಥಿನಿಯರ ಕಣ್ಣುಗಳಲ್ಲಿ ಕೃತಜ್ಞತೆಯ ಕಣ್ಣೀರು ತುಂಬಿಕೊಂಡ ದೃಶ್ಯಗಳು ಕಾರ್ಯಕ್ರಮಕ್ಕೆ ಭಾವನಾತ್ಮಕತೆ ನೀಡಿದವು. ಗುರುಗಳೂ ತಮ್ಮ ಶಿಷ್ಯರನ್ನು ಕಂಡು ಸಂತೋಷ ವ್ಯಕ್ತಪಡಿಸಿ ಹಳೆಯ ನೆನಪುಗಳನ್ನು ಹಂಚಿಕೊಂಡರು.

ಕಾರ್ಯಕ್ರಮವನ್ನು ಮುಖ್ಯೋಪಾಧ್ಯಾಯ ಎಸ್.ಎನ್. ಹೂಲಗೇರಿ ಉದ್ಘಾಟಿಸಿದರು. ರೇಖಾ ಮಡಿವಾಳ ಹಾಗೂ ರೇಖಾ ಉಳ್ಳಾಗಡ್ಡಿ ನಿರೂಪಿಸಿದರು. ಪ್ರಾಸ್ತಾವಿಕವಾಗಿ ಸ್ನೇಹಾ ಕಣಿವಿ ಮತ್ತು ಜಯಶ್ರೀ ಆದಿ ಮಾತನಾಡಿದರು. ಮಂಜುಳಾ ಪಾಚಂಗಿ ಪ್ರಾರ್ಥನೆ ಸಲ್ಲಿಸಿದರು. ಶ್ವೇತಾ ಅರವಟಗಿಮಠ ಹಾಗೂ ಗೀತಾ ಕಣಗಿನಹಾಳ ಗೀತ ಗಾಯನದ ಮೂಲಕ ಗುರುಗಳ ಸ್ಮರಣೆ ಮಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಎ.ಟಿ. ಮಳ್ಳಳ್ಳಿ, ಬಿ.ಡಿ. ಯರಗೊಪ್ಪ, ಎಂ.ಎಸ್. ಅತ್ತಾರ್, ಎಸ್. ಶಿವಮೂರ್ತಿ, ಎಸ್.ಎಫ್. ಧರ್ಮಾಯತ, ಆರ್.ಎಂ. ಗುಳಬಾಳ, ರಮೇಶ್ ಶಿಲ್ಪಿನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸುಮಾರು 50ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಶಾಲಾ ದಿನಗಳ ಅನುಭವಗಳನ್ನು ಹಂಚಿಕೊಂಡರು. ಬೆಂಗಳೂರು, ಪುಣೆ, ದಾಂಡೇಲಿ ಸೇರಿದಂತೆ ವಿವಿಧ ಊರುಗಳಿಂದ ಆಗಮಿಸಿದ ವಿದ್ಯಾರ್ಥಿನಿಯರ ಉಪಸ್ಥಿತಿಯಿಂದ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ಮೂಡಿತು.

# ಬೇಸಿಗೆ ಅಂತ್ಯದವರೆಗೆ ಕುಡಿಯುವ ನೀರಿಗೆ ನಿರಂತರ ನಿಗಾ

**ಕೆಡಿಪಿ ಸಭೆಯಲ್ಲಿ ಅಧಿಕಾರಿಗಳಿಗೆ ಸಚಿವ ಸಂತೋಷ ಲಾಡ್ ಕಟ್ಟುನಿಟ್ಟಿನ ಸೂಚನೆ – ಜಲಜೀವನ ಮಿಷನ್, ಕೃಷಿ, ಎಪಿಎಂಸಿ ವಿಷಯಗಳ ಸಮಗ್ರ ಪರಿಶೀಲನೆ**



■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ಬೇಸಿಗೆ ಕಾಲ ಮುಗಿಯುವವರೆಗೆ ಜಿಲ್ಲೆಯಲ್ಲಿ ಯಾವುದೇ ಗ್ರಾಮ ಹಾಗೂ ಪಟ್ಟಣಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ನಿರಂತರವಾಗಿ ನಿಗಾವಹಿಸಬೇಕು. ಈಗಾಗಲೇ ಜಿಲ್ಲೆಯ ವಿವಿಧ ತಾಲೂಕುಗಳ 15 ಗ್ರಾಮಗಳಲ್ಲಿ 17 ಕೊಳವೆಬಾವಿಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದು, ಜಿಲ್ಲಾಡಳಿತ ಮೇಲುಸ್ತುವಾರಿಯಲ್ಲಿ ಕ್ರಮವಹಿಸಿ, ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕೆಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ 2025-26ನೇ ಸಾಲಿನ ಮಾರ್ಚ್ 2026ರ ಅಂತ್ಯಕ್ಕೆ ಕೊನೆಗೊಂಡಂತೆ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಯೋಜನೆಯಡಿ ನಾಲ್ಕನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಜರುಗಿಸಿ ಮಾತನಾಡಿದರು.

ಮುಂಗಾರು ಪೂರ್ವದಲ್ಲಿ ಮಳೆ ಹೆಚ್ಚಾಗುತ್ತಿದ್ದು, ಯಾವುದೇ ಹಾನಿಯಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳಬೇಕು. ಕೃಷಿ ಚಟುವಟಿಕೆಗಳು ಆರಂಭವಾಗಿದ್ದು, ರೈತರಿಗೆ ಅಗತ್ಯವಿರುವ ಬೀಜ, ರಸಗೊಬ್ಬರ ಪೂರೈಕೆಯಾಗಬೇಕು. ಬಿತ್ತನೆ ಸಮಯದಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಕೃಷಿ ಇಲಾಖೆ ಯೋಜನಾಬದ್ಧವಾಗಿ ಬೀಜ, ರಸಗೊಬ್ಬರ ವಿತರಣೆಯನ್ನು ಮಾಡಬೇಕೆಂದು ಸಚಿವರು ಸೂಚಿಸಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಇಲಾಖೆಯು ಜಿಲ್ಲೆಯ ಎಪಿಎಂಸಿಗಳ ಸುಧಾರಣೆಗೆ ಅಗತ್ಯವಾದ ಪ್ರಸ್ತಾವನೆಯನ್ನು ರೂಪಿಸಬೇಕು. ಪಿಪಿಟಿ ಮೂಲಕ ಇಲಾಖೆಯಿಂದ ಜನಪ್ರತಿನಿಧಿಗಳ ಮುಂದೆ ಪ್ರದರ್ಶನ ನೀಡಿ, ಎಪಿಎಂಸಿಗಳ ಅಭಿವೃದ್ಧಿಗೆ ಯಾವೆಲ್ಲ ಕ್ರಮಗಳನ್ನು ಕೈಗೊಳ್ಳಬೇಕೆಂದು ವಿವರಿಸಬೇಕು. ಅಗತ್ಯವಿದ್ದಲ್ಲಿ ಸರ್ಕಾರದಿಂದ ವಿಶೇಷ ಅನುದಾನ ತರಲು ಪ್ರಯತ್ನಿಸಲಾಗುವುದು. ಬೆಂಬಲ ಬೆಲೆ ಯೋಜನೆಯಡಿ ಕಡಲೆಕಾಳು ಖರೀದಿ ಕೇಂದ್ರಗಳಲ್ಲಿ ಚೀಲಗಳ ಕೊರತೆಯಾದ ಕುರಿತು ಮನವಿ ಸಲ್ಲಿಕೆಯಾಗುತ್ತಿವೆ. ಈ ಕುರಿತು ಕ್ರಮವಹಿಸಿ, ಜಿಲ್ಲೆಗೆ ಅಗತ್ಯವಿರುವ ಗೋಣಿಚೀಲಗಳನ್ನು ತರಿಸಬೇಕು. ಮತ್ತು ಬ್ಯಾಹಟ್ಟಿ ಖರೀದಿ ಕೇಂದ್ರದಿಂದ ಖರೀದಿಸಿದ್ದ ರೈತರ ಹೆಸರು ಕಾಳು ಕುರಿತು ಹಣ ಪಾವತಿಸುವಲ್ಲಿ ತಾಂತ್ರಿಕ ಸಮಸ್ಯೆ ಉಂಟಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ ಸಮಸ್ಯೆ ಬಗೆಹರಿಸಬೇಕು ಎಂದು ಸಚಿವರು ನಿರ್ದೇಶಿಸಿದರು.

> ಹುಬ್ಬಳ್ಳಿ-ಧಾರವಾಡ ಅವಳಿನಗರಕ್ಕೆ 43 ಎಂಎಲ್‌ಡಿ ಪ್ರಮಾಣದ ಕುಡಿಯುವ ನೀರಿನ ಸರಬರಾಜು ಪ್ರಾರಂಭವಾಗಿದೆ. ಮೇ 10ರೊಳಗಾಗಿ ಎಲ್ಲ ವಾರ್ಡ್‌ಗಳಿಗೆ ನಾಲ್ಕು ರಿಂದ ಐದು ದಿನಗಳಿಗೊಮ್ಮೆ ನೀರು ಸರಬರಾಜು ಮಾಡಲಾಗುವುದೆಂದು ಪಾಲಿಕೆ ಹಾಗೂ ಎಲ್ & ಟಿ ಅಧಿಕಾರಿಗಳು ತಿಳಿಸಿದ್ದು, ಸಂಬಂಧಿಸಿದ ಅಧಿಕಾರಿಗಳು ಕಾಮಗಾರಿ ಪ್ರಗತಿಯನ್ನು ಪರಿಶೀಲಿಸಿ, ಶೀಘ್ರವಾಗಿ ಸಾರ್ವಜನಿಕರಿಗೆ ನಿಯಮಿತವಾಗಿ ಕುಡಿಯುವ ನೀರು ದೊರೆಯುವಂತೆ ಕ್ರಮವಹಿಸಬೇಕೆಂದು ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಕುಡಿಯುವ ನೀರು ಸಂಬಂಧಿತ ಜಲಜೀವನ ಮಿಷನ್ ಯೋಜನೆಯು ನಿಧಾನಗತಿಯಲ್ಲಿ ಸಾಗುತ್ತಿದೆ. ಸಾಕಷ್ಟು ಬಾರಿ ಎಚ್ಚರಿಕೆ ನೀಡಿ, ಎಲ್ & ಟಿ ಕಂಪನಿಗೆ ಈಗಾಗಲೇ ರೂ.30 ಕೋಟಿ ದಂಡ ವಿಧಿಸಲಾಗಿದೆ. ಮೇ ಅಂತ್ಯದೊಳಗೆ 28 ಗ್ರಾಮಗಳಿಗೆ ಯೋಜನೆಯಡಿ ಕುಡಿಯುವ ನೀರು ಸರಬರಾಜು ಮಾಡಲು ಕ್ರಮವಹಿಸಿದ್ದಾರೆ. ಮಾರ್ಚ್ 2027ರೊಳಗೆ ಜಿಲ್ಲೆಯ ಎಲ್ಲ ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಲಾಯಿತು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಜಲಜೀವನ ಮಿಷನ್ ಕಾಮಗಾರಿಗಳು ಗುಣಮಟ್ಟದಿಂದ ಮತ್ತು ಒಪ್ಪಂದದಂತೆ ಅನುಷ್ಠಾನಗೊಳ್ಳುವುದನ್ನು ಖಾತ್ರಿಪಡಿಸಿಕೊಳ್ಳಬೇಕು ಹಾಗೂ ಸರಿಯಾದ ಮೇಲುಸ್ತುವಾರಿ ವಹಿಸಬೇಕೆಂದು ಸಚಿವರು ಸೂಚನೆ ನೀಡಿದರು.

ಶಾಸಕರಾದ ಎಂ.ಆರ್. ಪಾಟೀಲ, ಮಹೇಶ ಟೆಂಗಿನಕಾಯಿ, ವಿಧಾನ ಪರಿಷತ್ ಸದಸ್ಯ ಎಫ್.ಎಚ್. ಜಕ್ಕಪ್ಪನವರ ಮಾತನಾಡಿದರು.

> "ಜಿಲ್ಲೆಯಲ್ಲಿ ರೈತರ ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸಬೇಕು. ನಗರ ಮತ್ತು ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರು ಕೊರತೆ ಆಗದಂತೆ ಎಚ್ಚರಿಕೆ ವಹಿಸಬೇಕು. ಹುಬ್ಬಳ್ಳಿ ಗಬ್ಬೂರ ಕ್ರಾಸ್‌ನಲ್ಲಿ ತಾತ್ಕಾಲಿಕ ಬಸ್ ನಿಲ್ದಾಣ ನಿರ್ಮಿಸಿ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ರಾಯನಾಳ ಗ್ರಾಮದಲ್ಲಿ ಎನ್‌ಎಚ್-4 ಹೆದ್ದಾರಿಗೆ ಸಂಪರ್ಕ ರಸ್ತೆ ನಿರ್ಮಾಣಕ್ಕೆ ಕ್ರಮವಹಿಸಬೇಕು."
>
> – **ಸಲೀಂ ಅಹ್ಮದ್,** ವಿಧಾನ ಪರಿಷತ್ ಸದಸ್ಯ.

> "ನವಲಗುಂದ ಸೇರಿದಂತೆ ಜಿಲ್ಲೆಯಲ್ಲಿ ತೆರೆದಿರುವ ಸರ್ಕಾರದ ವಿವಿಧ ಖರೀದಿ ಕೇಂದ್ರಗಳಲ್ಲಿ ಗೋಣಿಚೀಲಗಳ ಕೊರತೆ ಉಂಟಾಗಿದೆ. ರೈತರು ಕಡಲೆ ರಾಶಿ ತೆಗೆದುಕೊಂಡು ಕಾಯುತ್ತಿದ್ದಾರೆ. ಅವರಿಗೆ ಅಗತ್ಯವಿರುವಷ್ಟು ಗೋಣಿಚೀಲ ತಕ್ಷಣ ಪೂರೈಸಬೇಕು. ಬ್ಯಾಹಟ್ಟಿ ಖರೀದಿ ಕೇಂದ್ರದಲ್ಲಿ ಸುಮಾರು 81 ರೈತರಿಗೆ ಹಣ ಪಾವತಿಸಿಲ್ಲ. ಈ ಕುರಿತು ಕ್ರಮವಹಿಸಬೇಕು."
>
> – **ಎನ್.ಎಚ್. ಕೋನರಡ್ಡಿ,** ಶಾಸಕ.

ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಮಾತನಾಡಿ, ಎಲ್ಲಾ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಗಿದೆ. ಖರೀದಿ ಕೇಂದ್ರಗಳ ಸಮಸ್ಯೆಗಳಿಗೆ ಕ್ರಮ ಕೈಗೊಳ್ಳಲಾಗಿದೆ. ಬ್ಯಾಹಟ್ಟಿ ಪ್ರಕರಣದ ಕುರಿತು ವರದಿ ಪಡೆದು ಕ್ರಮವಹಿಸಲಾಗುವುದು ಎಂದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಯಿತು. ವೇದಿಕೆಯಲ್ಲಿ ಪೊಲೀಸ್ ಹಾಗೂ ಆಡಳಿತಾಧಿಕಾರಿಗಳು, ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೇ 16ರಂದು 'ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026'

**ತಂತ್ರಜ್ಞಾನ ಸ್ವಾಯತ್ತತೆ ಕೇಂದ್ರ ವಿಷಯ । ಜಾಗತಿಕ ತಜ್ಞರು, ಸ್ಟಾರ್ಟ್‌ಅಪ್‌ಗಳಿಗೆ ಒಂದೇ ವೇದಿಕೆ**



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪ್ಯಾನ್ ಐಐಟಿ ಅಲ್ಯೂಮ್ನಿ ಇಂಡಿಯಾ ಅಸೋಸಿಯೇಷನ್ ಮತ್ತು ಕರ್ನಾಟಕ ಸರ್ಕಾರದ ಸಹಯೋಗದಲ್ಲಿ ಮೇ 16ರಂದು ಬೆಂಗಳೂರಿನಲ್ಲಿ 'ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026' ಆಯೋಜಿಸಲಾಗಿದೆ.

"ತಂತ್ರಜ್ಞಾನದಲ್ಲಿನ ಸ್ವಾಯತ್ತತೆ" ಎಂಬ ವಿಷಯದಡಿ ಈ ಸಮಿಟ್ ನಡೆಯಲಿದೆ ಎಂದು ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ತಿಳಿಸಿದರು.

ಬೆಂಗಳೂರು ಇಂದು ಭಾರತದ ತಂತ್ರಜ್ಞಾನ ಕ್ಷೇತ್ರದ ಕೇಂದ್ರವಾಗಿದ್ದು, ಸ್ಟಾರ್ಟ್‌ಅಪ್‌ಗಳು, ವೆಂಚರ್ ಕ್ಯಾಪಿಟಲ್ ಹೂಡಿಕೆಗಳು ಹಾಗೂ ಇಂಜಿನಿಯರಿಂಗ್ ಪ್ರತಿಭೆಗಳ ಕೇಂದ್ರವಾಗಿ "ಪೂರ್ವದ ಸಿಲಿಕಾನ್ ವ್ಯಾಲಿ" ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಹೇಳಿದರು.

ರಾಜ್ಯವು ಏರೋಸ್ಪೇಸ್, ರಕ್ಷಣಾ ಹಾಗೂ ಮೂಲ ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಬಲವಾದ ನೆಲೆ ಹೊಂದಿದ್ದು, ಇನ್ಫೋಸಿಸ್, ಟಿಸಿಎಸ್, ಎಚ್‌ಸಿಎಲ್ ಮತ್ತು ವಿಪ್ರೋ ಮುಂತಾದ ಐಟಿ ದಿಗ್ಗಜಗಳ ಬೆಳವಣಿಗೆಯಿಂದ ಭಾರತ ಜಾಗತಿಕ ತಂತ್ರಜ್ಞಾನ ನಕ್ಷೆಯಲ್ಲಿ ಪ್ರಮುಖ ಸ್ಥಾನ ಪಡೆದಿದೆ ಎಂದರು.

> "ತಂತ್ರಜ್ಞಾನ ಸ್ವಾಯತ್ತತೆಯನ್ನು ಸಾಧಿಸಲು ಅಕಾಡೆಮಿಯಾ, ಕೈಗಾರಿಕೆ ಮತ್ತು ಸರ್ಕಾರಗಳ ಸಹಕಾರ ಅತ್ಯವಶ್ಯಕ; ಈ ಸಮಿಟ್ ಅದಕ್ಕೆ ವೇದಿಕೆ."
>
> – **ಪಂಕಜ್ ಕುಮಾರ್ ಪಾಂಡೆ.**

ಪ್ರಸ್ತುತ ಡೀಪ್ ಟೆಕ್, ಕೃತಕ ಬುದ್ಧಿಮತ್ತೆ ಮತ್ತು ವೈಜ್ಞಾನಿಕ ನವೀನತೆಗಳ ಯುಗದಲ್ಲಿ ಅಕಾಡೆಮಿಯಾ, ಕೈಗಾರಿಕೆ ಮತ್ತು ಸರ್ಕಾರಗಳ ನಡುವೆ ಸಹಕಾರ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಈ ಸಮಿಟ್ ರೂಪುಗೊಂಡಿದೆ ಎಂದು ಹೇಳಿದರು.

ಪ್ಯಾನ್ ಐಐಟಿ ಅಧ್ಯಕ್ಷ ಪ್ರಭಾತ್ ಕುಮಾರ್ ಮಾತನಾಡಿ, ಸಮಿಟ್‌ನಲ್ಲಿ ಎಐ, ರಕ್ಷಣಾ, ಸೆಮಿಕಂಡಕ್ಟರ್, ಇಂಧನ, ಮೊಬೈಲಿಟಿ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಪ್ಯಾನೆಲ್ ಚರ್ಚೆಗಳು ನಡೆಯಲಿವೆ ಎಂದರು.

200ಕ್ಕೂ ಹೆಚ್ಚು ವೆಂಚರ್ ಕ್ಯಾಪಿಟಲಿಸ್ಟ್‌ಗಳೊಂದಿಗೆ ಸ್ಟಾರ್ಟ್‌ಅಪ್‌ಗಳನ್ನು ಸಂಪರ್ಕಿಸುವ ಪಿಚ್-ಹ್ಯಾಕಥಾನ್ ಹಾಗೂ 10,000 ಮಂದಿ ಭಾಗವಹಿಸುವ ಹ್ಯಾಕಥಾನ್‌ಗಳ ಮೂಲಕ ನೈಜ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯಲಾಗುವುದು ಎಂದು ಹೇಳಿದರು.

ಸಮಿಟ್‌ನಲ್ಲಿ ಶ್ರೀ ಶ್ರೀ ರವಿ ಶಂಕರ್, ಡಾ. ಶಾಲಿನಿ ರಜನೀಶ್, ಡಾ. ವಿ. ಅನಂತ ನಾಗೇಶ್ವರನ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ದಿನಪೂರ್ತಿ ನಡೆಯುವ ಈ ಸಮಿಟ್‌ನಲ್ಲಿ ಮುಖ್ಯ ಭಾಷಣಗಳು, ಪ್ಯಾನೆಲ್ ಚರ್ಚೆಗಳು, ಸಿಎಕ್ಸ್‌ಒ ರೌಂಡ್‌ಟೇಬಲ್, ಸ್ಟಾರ್ಟ್‌ಅಪ್ ಪ್ರದರ್ಶನಗಳು, ಹ್ಯಾಕಥಾನ್ ಹಾಗೂ ಇನೋವೇಶನ್ ಪ್ರದರ್ಶನಗಳು ನಡೆಯಲಿವೆ.

# ಶರಣರ ಕ್ರಾಂತಿ ಇಂದಿಗೂ ಪ್ರಸ್ತುತ

**ಸಮಾನತೆಯ ಸಂದೇಶ ಸಾರಿದ ಬಸವಣ್ಣ-ರೇಣುಕಾ ಲಕ್ಕುಂಡಿ**



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸಮಾಜದಲ್ಲಿ ಸಮಾನತೆ ಸ್ಥಾಪಿಸಲು 12ನೇ ಶತಮಾನದಲ್ಲೇ ಶರಣರು ಬೃಹತ್ ಕ್ರಾಂತಿಯನ್ನು ನಡೆಸಿದರು ಎಂದು ಎಫ್.ಎಂ.ಡಬಾಲಿ ಪ್ರೌಢಶಾಲೆಯ ಶಿಕ್ಷಕಿ ರೇಣುಕಾ ನಾಗರಾಜ ಲಕ್ಕುಂಡಿ ಹೇಳಿದರು.

ಸೋಮವಾರ ಶಿರಹಟ್ಟಿಯ ಶ್ರೀ ಬಸವೇಶ್ವರ ವೃತ್ತದಲ್ಲಿ ನಡೆದ ವಿಶ್ವಗುರು ಬಸವಣ್ಣ ಹಾಗೂ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ಬಸವಣ್ಣನವರ ತತ್ವಗಳ ಮಹತ್ವವನ್ನು ವಿವರಿಸಿದರು.

"ಸಮಾಜದಲ್ಲಿ ಸಮಾನತೆ ತರುವ ಉದ್ದೇಶದಿಂದ ಬಸವಣ್ಣನವರು ಶರಣರನ್ನು ಒಗ್ಗೂಡಿಸಿ ಅನುಭವ ಮಂಟಪವನ್ನು ರಚಿಸಿ, ವಚನಗಳ ಮೂಲಕ ಜಾಗೃತಿ ಮೂಡಿಸಿದರು" ಎಂದು ರೇಣುಕಾ ಲಕ್ಕುಂಡಿ ಹೇಳಿದರು.

ಅವರು ಹಲವಾರು ಸಂಕಷ್ಟಗಳನ್ನು ಎದುರಿಸಿದ್ದರೂ ಸಮಾಜದ ಉದ್ಧಾರಕ್ಕಾಗಿ ಮಾಡಿದ ಕೊಡುಗೆ ಅಪಾರವಾಗಿದೆ. ಕನ್ನಡ ಭಾಷೆಯಲ್ಲೇ ವಚನಗಳನ್ನು ರಚಿಸಿ ವಚನ ಸಾಹಿತ್ಯಕ್ಕೆ ಮಹತ್ವ ತಂದಿದ್ದಾರೆ ಎಂದು ಹೇಳಿದರು.

"ಬಸವಣ್ಣನವರ ವಚನಗಳು ಸರ್ವಕಾಲಕ್ಕೂ ಪ್ರಸ್ತುತವಾಗಿದ್ದು, ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು" ಎಂದು ಅವರು ತಿಳಿಸಿದರು.

ಎಫ್.ಎಂ.ಡಬಾಲಿ ಕಾಲೇಜಿನ ಉಪನ್ಯಾಸಕಿ ಸುಧಾ ಹುಚ್ಚಣ್ಣವರ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರ ಶೌರ್ಯ, ತಾಯಿಯ ಪ್ರೀತಿ ಹಾಗೂ ದೇಶಪ್ರೇಮ ಎಲ್ಲರಿಗೂ ಆದರ್ಶವಾಗಿದೆ ಎಂದರು. "ದೇಶದ ಇತಿಹಾಸದಲ್ಲಿ ಶಿವಾಜಿ ಮಹಾರಾಜರು ಎಂದೆಂದಿಗೂ ಅಜರಾಮರರಾಗಿದ್ದಾರೆ" ಎಂದು ಸುಧಾ ಹುಚ್ಚಣ್ಣವರ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಮಿತಿಯ ಬಸವರಾಜ ತುಳಿ ವಹಿಸಿದ್ದರು. ಎಸ್.ಬಿ. ಹೊಸೂರ ನಿರೂಪಣೆ ಮಾಡಿದರು ಹಾಗೂ ಗೂಳಪ್ಪ ಕರಿಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದಕ್ಕೂ ಮೊದಲು ಬೆಳಿಗ್ಗೆ 9 ಗಂಟೆಗೆ ಮರಾಠಾ ಗಲ್ಲಿಯ ಶ್ರೀ ಅಂಬಾಭವಾನಿ ದೇವಸ್ಥಾನದಿಂದ ಬೃಹತ್ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಅಧ್ಯಕ್ಷ ವಿ.ವಿ. ಕಪ್ಪತ್ತನವರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಎಚ್.ಎಂ. ದೇವಗಿರಿ, ಎನ್.ಆರ್. ಕುಲಕರ್ಣಿ, ನಾಗರಾಜ ಲಕ್ಕುಂಡಿ, ಕೆ.ಎ. ಬಳಿಗೇರ, ಪರಮೇಶ ಪರಬ, ಅಜ್ಜುಗೌಡ ಪಾಟೀಲ, ಹೊನ್ನಪ್ಪ ಶಿರಹಟ್ಟಿ, ನಂದಕ್ಕ ಕಪ್ಪತ್ತನವರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪ್ರತ್ಯೇಕ ಮಕ್ಕಳ ಸಾಹಿತ್ಯ ಅಕಾಡೆಮಿ ಸ್ಥಾಪನೆ ಅಗತ್ಯ

**ಮಕ್ಕಳ ಸಾಹಿತ್ಯಕ್ಕೆ ಸರ್ಕಾರದಿಂದ ಸೂಕ್ತ ಮಾನ್ಯತೆ ಬೇಕು: ಡಾ. ಮಲ್ಲಿಕಾ ಘಂಟಿ**



■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮಕ್ಕಳ ಮಾನಸಿಕ ವಿಕಾಸಕ್ಕೆ ಪೂರಕವಾದ ಸಾಹಿತ್ಯವನ್ನು ಉತ್ತೇಜಿಸಲು ರಾಜ್ಯ ಸರ್ಕಾರವು ತಕ್ಷಣವೇ ಪ್ರತ್ಯೇಕ ಮಕ್ಕಳ ಸಾಹಿತ್ಯ ಅಕಾಡೆಮಿಯನ್ನು ಸ್ಥಾಪಿಸಬೇಕು ಎಂದು ಹಿರಿಯ ಸಾಹಿತಿ ಹಾಗೂ ಹಂಪಿ ಕನ್ನಡ ವಿಶ್ವವಿದ್ಯಾಲಯದ ನಿವೃತ್ತ ಉಪಕುಲಪತಿ ಡಾ. ಮಲ್ಲಿಕಾ ಘಂಟಿ ಒತ್ತಾಯಿಸಿದರು.

ನಗರದ ವಿದ್ಯಾರ್ಥಕ ಸಂಘದ ರಾ.ಹ. ದೇಶಪಾಂಡೆ ಸಭಾಭವನದಲ್ಲಿ ನಡೆದ ಮಕ್ಕಳ ಸಾಹಿತ್ಯ ಗೌರವ ಪ್ರಶಸ್ತಿ ಹಾಗೂ ಪುಸ್ತಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ಉತ್ತಮ ಕೃತಿಗಳು ಪ್ರಕಟವಾಗುತ್ತಿದ್ದರೂ ವಿಮರ್ಶಕರಿಂದ ಮತ್ತು ಸರ್ಕಾರಿ ಮಟ್ಟದಲ್ಲಿಯೂ ತಕ್ಕ ಮನ್ನಣೆ ದೊರೆಯುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

> "ಮಕ್ಕಳ ಮನಸ್ಸನ್ನು ರೂಪಿಸುವಲ್ಲಿ ಸಾಹಿತ್ಯವೇ ಶಕ್ತಿ; ಅದಕ್ಕೆ ಪ್ರತ್ಯೇಕ ಅಕಾಡೆಮಿ ಅಗತ್ಯ."
>
> – **ಡಾ. ಮಲ್ಲಿಕಾ ಘಂಟಿ.**

2010ರಲ್ಲಿಯೇ ಮಕ್ಕಳ ಸಾಹಿತ್ಯ ಅಕಾಡೆಮಿ ಸ್ಥಾಪನೆ ಕುರಿತು ಮನವಿ ಸಲ್ಲಿಸಿದ್ದರೂ ಇನ್ನೂ ಕ್ರಮ ಕೈಗೊಳ್ಳದಿರುವುದು ಬೇಸರ ತಂದಿದೆ ಎಂದರು.

ಉತ್ತರ ಕರ್ನಾಟಕದಲ್ಲಿ, ವಿಶೇಷವಾಗಿ ವಿಜಯಪುರ ಜಿಲ್ಲೆಯಲ್ಲಿ ಮಕ್ಕಳ ಸಾಹಿತ್ಯಕ್ಕೆ ಮಹತ್ವದ ಕೊಡುಗೆ ನೀಡಿದ ಸಾಹಿತಿಗಳಿರುವುದರಿಂದ ಅಕಾಡೆಮಿಯನ್ನು ಅಲ್ಲಿ ಸ್ಥಾಪಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ಇಂದಿನ ತಾಂತ್ರಿಕ ಯುಗದಲ್ಲಿ ಭೌತಿಕ ವ್ಯಾಮೋಹದಿಂದ ಮಾನವ ಸಂಬಂಧಗಳು ದೂರವಾಗುತ್ತಿವೆ. ಮಕ್ಕಳನ್ನು ಭಾವನಾತ್ಮಕ ಹಾಗೂ ಸೃಜನಶೀಲವಾಗಿ ಬೆಳೆಸುವಲ್ಲಿ ಸಾಹಿತ್ಯದ ಪಾತ್ರ ಅತ್ಯಂತ ಪ್ರಮುಖವಾಗಿದೆ. ಗ್ರಾಮ ಪಂಚಾಯಿತಿ ಮಟ್ಟದ ಗ್ರಂಥಾಲಯಗಳಲ್ಲಿ ಮಕ್ಕಳ ಸಾಹಿತ್ಯ ಪುಸ್ತಕಗಳು ಲಭ್ಯವಾಗಬೇಕು ಎಂದು ಹೇಳಿದರು.

ಸರ್ಕಾರ ಮತ್ತು ಸಂಘ-ಸಂಸ್ಥೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಮಕ್ಕಳ ಸಾಹಿತ್ಯ ಬೆಳವಣಿಗೆಗೆ ಉತ್ತೇಜನ ನೀಡಬೇಕು. ಈ ನಿಟ್ಟಿನಲ್ಲಿ ಕರ್ನಾಟಕ ವಿದ್ಯಾರ್ಥಕ ಸಂಘ ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಂಬುನಾಥ ಕಂಚ್ಯಾಣಿ, ಗುಂಡುರಾವ್ ದೇಸಾಯಿ ಸೇರಿದಂತೆ ಹಲವಾರು ಸಾಹಿತಿಗಳು ಪ್ರಶಸ್ತಿ ಸ್ವೀಕರಿಸಿ ತಮ್ಮ ಅನಿಸಿಕೆ ಹಂಚಿಕೊಂಡರು.

# ಗೋವನ್ನು ರಾಷ್ಟ್ರೀಯ ಪ್ರಾಣಿಯಾಗಿಸಲು ಸಹಿ ಅಭಿಯಾನ

**ಹಿಂದೂಪರ ಸಂಘಟನೆಗಳಿಂದ ಪ್ರಧಾನಿಗೆ ಮನವಿ ಸಲ್ಲಿಕೆ**

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಗೋವನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಲು ದೇಶವ್ಯಾಪಿ ನಡೆಯುತ್ತಿರುವ ಅಭಿಯಾನದ ಅಂಗವಾಗಿ ಶಿರಹಟ್ಟಿಯಲ್ಲಿ ಹಿಂದೂಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಸಹಿ ಸಂಗ್ರಹಿಸಿ ರಾಷ್ಟ್ರಪತಿ, ಪ್ರಧಾನಮಂತ್ರಿ, ಮುಖ್ಯಮಂತ್ರಿ ಹಾಗೂ ರಾಜ್ಯಪಾಲರಿಗೆ ತಹಸೀಲ್ದಾರ್ ಮೂಲಕ ಮನವಿ ಸಲ್ಲಿಸಲಾಯಿತು.

ಸೋಮವಾರ ನಡೆದ ಈ ಅಭಿಯಾನದಲ್ಲಿ ನೂರಾರು ಮಂದಿ ಭಾಗವಹಿಸಿ ಸಹಿ ಸಂಗ್ರಹ ಕಾರ್ಯಕ್ಕೆ ಬೆಂಬಲ ನೀಡಿದರು.

"ಗೋಮಾತೆಗೆ ರಾಷ್ಟ್ರ ಮಟ್ಟದಲ್ಲಿ ಗೌರವ ದೊರಕುವಂತೆ ಕೇಂದ್ರ ಸರ್ಕಾರ ಕಾನೂನು ರೂಪಿಸಬೇಕು" ಎಂದು ತಾಲೂಕು ಅಧ್ಯಕ್ಷ ಸಂತೋಷ ಕುರಿ ಹೇಳಿದರು. ಸನಾತನ ಸಂಸ್ಕೃತಿಯ ಪ್ರತೀಕವಾಗಿರುವ ಗೋವು ದೇಶವಾಸಿಗಳ ಆಸ್ಥೆಯ ಕೇಂದ್ರವಾಗಿದ್ದು, ಅದರ ರಕ್ಷಣೆಗೆ ವಿಶೇಷ ಕ್ರಮ ಅಗತ್ಯವಿದೆ ಎಂದರು.

"ಗೋವಂಶದ ದುಸ್ಥಿತಿ ಕಳವಳಕಾರಿ ಆಗಿದ್ದು, ಕಳ್ಳಸಾಗಣೆ ಹಾಗೂ ರಸ್ತೆಗಳಲ್ಲಿನ ನಿರ್ಲಕ್ಷ್ಯದಿಂದ ಅವುಗಳು ಸಂಕಷ್ಟಕ್ಕೆ ಸಿಲುಕುತ್ತಿವೆ" ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಗೋವಂಶಕ್ಕೆ ಸಂಪೂರ್ಣ ಸುರಕ್ಷತೆ ಒದಗಿಸುವ ಜೊತೆಗೆ ಗೋ ಪಾಲನಾ ಸಚಿವಾಲಯವನ್ನು ಸ್ಥಾಪಿಸಬೇಕು ಎಂಬುದಾಗಿ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ರಾಮಣ್ಣ ಕಂಬಳಿ, ಫಕ್ಕೀರೇಶ ರಟ್ಟಿಹಳ್ಳಿ, ಗೂಳಪ್ಪ ಕರಿಗಾರ, ಪ್ರವೀಣಗೌಡ ಪಾಟೀಲ, ಪರಶುರಾಮ ಡೊಂಕಬಳ್ಳಿ, ರಾಜೀವರಡ್ಡಿ ಬಮ್ಮನಕಟ್ಟಿ, ವೀರಣ್ಣ ಅಂಗಡಿ, ಮಲ್ಲಿಕಾರ್ಜುನ ಕಬಾಡಿ, ಶ್ರೀನಿವಾಸ ಬಾರಬಾರ, ಉಮೇಶ ಶೇಳಕೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಸೋಮೇಶ್ವರ ಜಾತ್ರೆಯಲ್ಲಿ ಕಡುಬಿನ ಕಾಳಗ ಸಂಭ್ರಮ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಗೋಧೂಳಿ ವೇಳೆಯಲ್ಲಿ ಅಪಾರ ಭಕ್ತರ ಹರ ಹರ ಮಹಾದೇವ ಘೋಷಣೆಗಳ ನಡುವೆ ಶ್ರದ್ಧಾ-ಭಕ್ತಿಯಿಂದ ಕಡುಬಿನ ಕಾಳಗ ಕಾರ್ಯಕ್ರಮ ಜರುಗಿತು.



ಕಡುಬಿನ ಕಾಳಗ ಸಂದರ್ಭದಲ್ಲಿ ಸೋಮೇಶ್ವರ ದೇವರ ಉತ್ಸವ ಮೂರ್ತಿಯೊಂದಿಗೆ ಪಲ್ಲಕ್ಕಿ ದೇವಸ್ಥಾನದ ಆವರಣ ಹಾಗೂ ರಥಬೀದಿ ಪ್ರದಕ್ಷಿಣೆ ಮಾಡಿ, ನಂತರ ಸೋಮೇಶ್ವರ ಪಾದಗಟ್ಟಿಗೆ ತೆರಳಿ ಅಲ್ಲಿ ಐದು ಸುತ್ತು ಪ್ರದಕ್ಷಿಣೆಯೊಂದಿಗೆ ವಿಧಿವಿಧಾನಗಳು ನೆರವೇರಿಸಲಾಯಿತು.

ಈ ವೇಳೆ ಮುಳಗುಂದ ಮನೆತನದವರು ಸಂಪ್ರದಾಯದಂತೆ ಕಡುಬಿನ ಚೂರುಗಳು, ಬೆಂಡು, ಬತ್ತಾಸೆ, ಬಿಸ್ಕಟ್, ಬೆಲ್ಲ, ಹಣ್ಣು, ಕಲ್ಲುಸಕ್ಕರೆ ಸೇರಿದಂತೆ ಸಿಹಿ ಪದಾರ್ಥಗಳನ್ನು ಭಕ್ತರತ್ತ ಎರಚಿದರು.

"ಈ ಪ್ರಸಾದವನ್ನು ಭಕ್ತಿಯಿಂದ ಸ್ವೀಕರಿಸಿದರೆ ಕಷ್ಟ-ಕಾರ್ಪಣ್ಯಗಳು ಹಾಗೂ ರೋಗ-ರುಜಿನಗಳು ದೂರವಾಗುತ್ತವೆ" ಎಂಬ ನಂಬಿಕೆಯಿಂದ ಭಕ್ತರು ಪ್ರಸಾದವನ್ನು ಆಯ್ದುಕೊಂಡು ಭಕ್ತಿಭಾವದಿಂದ ಸ್ವೀಕರಿಸಿದರು.

ಕಾರ್ಯಕ್ರಮದ ವೇಳೆ ಜಯಘೋಷ, ಡೊಳ್ಳು ಮತ್ತು ನಗಾರಿ ವಾದ್ಯಗಳ ಝೇಂಕಾರದಿಂದ ಪ್ರದೇಶ ಭಕ್ತಿರಸದ ವಾತಾವರಣದಲ್ಲಿ ತೇಲಿತು.

ಸೋಮೇಶ್ವರ ಜಾತ್ರಾ ಸಮಿತಿಯ ಮುಖಂಡರಾದ ಕುಬೇರಪ್ಪ ಮಹಾಂತಶೆಟ್ಟರ, ಗುರಣ್ಣ ಪಾಟೀಲಕುಲಕರ್ಣಿ, ಚನ್ನಪ್ಪ ಜಗಲಿ, ವಿರೂಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಇದಲ್ಲದೆ ಸೋಮಣ್ಣ ಮುಳಗುಂದ, ಅಶೋಕ ಮುಳಗುಂದ, ಚಂದ್ರು ಹಂಪಣ್ಣವರ, ಬಸವರಾಜ ಪುತಾಣಿ, ಚಂದ್ರು ಹುರಕಡ್ಲಿ, ರಮೇಶ ಹೆಬ್ಬಾಳ, ಮುದಕಪ್ಪ ಅಣ್ಣಿಗೇರಿ, ಸಿದ್ದು ರಾಚನಾಯ್ಕರ, ರಾಮಣ್ಣ ಗೌರಿ, ಶಿವಯೋಗಿ ಅಂಕಲಕೋಟಿ, ಈರಣ್ಣ ಮುಳಗುಂದ, ಸಿದ್ದನಗೌಡ ಬಳ್ಳೊಳ್ಳಿ, ಬಸಣ್ಣ ಬಾಳಿಕಾಯಿ, ನಂದೀಶ ಬಂಡಿವಾಡ, ಪ್ರಕಾಶ ಮುಳಗುಂದ, ದೀಪು ಕೊಂಚಿಗೇರಿಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅರ್ಚಕರಾದ ಸಮೀರ ಪೂಜಾರ, ರಾಘವೇಂದ್ರ ಪೂಜಾರ ಸೇರಿದಂತೆ ದೇವಸ್ಥಾನ ಜಾತ್ರಾ ಸಮಿತಿ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್, ಹಿರಿಯರು, ಅರ್ಚಕರ ಸಮಿತಿ, ಯುವಕರ ತಂಡ ಹಾಗೂ ಅಪಾರ ಭಕ್ತರು ಪಾಲ್ಗೊಂಡಿದ್ದರು.

# ಬೇಸಿಗೆ ಶಿಬಿರದಿಂದ ಕಲಿಕೆಗೆ ಸಹಕಾರಿ: ಮರಿದೇವರಮಠ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬೇಸಿಗೆ ಶಿಬಿರಗಳನ್ನು ಹಮ್ಮಿಕೊಳ್ಳುವುದರಿಂದ ಮಕ್ಕಳ ನಿರಂತರ ಕಲಿಕೆಗೆ ಸಹಕಾರಿಯಾಗುತ್ತದೆ ಎಂದು ಸರ್ಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯ ಪ್ರಧಾನ ಗುರು ಪಿ.ಎಸ್. ಮರಿದೇವರಮಠ ಹೇಳಿದರು.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ಆಯೋಜಿಸಿದ್ದ ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬೇಸಿಗೆ ರಜೆ ಎಂದರೆ ಮಕ್ಕಳಿಗೆ ಸಂಭ್ರಮದ ಕಾಲವಾಗಿದ್ದು, ಈ ಸಮಯದಲ್ಲಿ ಮೋಜು-ಮಸ್ತಿಗೆ ಹೆಚ್ಚು ಸಮಯ ನೀಡುವುದು ಸಹಜ. ಆದರೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿರುವುದರಿಂದ ನಿರಂತರ ಅಭ್ಯಾಸ ಅಗತ್ಯವಾಗಿದೆ. ಈ ಹಿನ್ನೆಲೆ ಮಕ್ಕಳ ಕಲಿಕೆಯಲ್ಲಿ ನಿರಂತರತೆ ಇರಲೆಂಬ ಉದ್ದೇಶದಿಂದ ಬೇಸಿಗೆ ಶಿಬಿರವನ್ನು ಪ್ರಾರಂಭಿಸಲಾಗಿದೆ. ಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಮಾಹಾಂತೇಶ ಕಣವಿ ಅಧ್ಯಕ್ಷತೆ ವಹಿಸಿದ್ದರು. ಶೋಭಾ ಪಾಟೀಲ, ಬಸವರಾಜ ನಾಯ್ಕರ್, ಬಸಮ್ಮಾ ಲದ್ದಿ ಹಾಗೂ ರೇಣುಕಾ ಪರ್ವತಗೌಡ್ರ ಉಪಸ್ಥಿತರಿದ್ದರು.

## ಸಾಂಸ್ಕೃತಿಕ ಪರಂಪರೆ ಉಳಿಸಲು ತಂತ್ರಜ್ಞಾನ ಬಳಕೆ: ಡಿಸಿ ಶ್ರೀಧರ್

# ಶತಮಾನಗಳ ಹಸ್ತಪ್ರತಿಗಳಿಗೆ ಡಿಜಿಟಲ್ ರಕ್ಷಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ದೇಶದಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಹಸ್ತಪ್ರತಿಗಳು, ಕೈಬರಹದ ಪತ್ರಗಳು ಹಾಗೂ ದಾಖಲೆಗಳನ್ನು ಆಧುನಿಕ ತಂತ್ರಜ್ಞಾನಗಳ ಮೂಲಕ ಶಾಶ್ವತವಾಗಿ ಸಂರಕ್ಷಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಂಜೆ ಜರುಗಿದ ಸಭೆಯಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯಯೋಜನೆ ಕುರಿತು ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇಶದಾದ್ಯಂತ ಇರುವ ಹಸ್ತಪ್ರತಿಗಳ ಮಾಹಿತಿಯನ್ನು ಕೇಂದ್ರ ಸರ್ಕಾರ ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್‌ನಲ್ಲಿ ಅಪ್‌ಲೋಡ್ ಮಾಡುವ ಮೂಲಕ ರಾಷ್ಟ್ರ ಮಟ್ಟದ ದತ್ತಾಂಶವನ್ನು ನಿರ್ಮಿಸಿ, ಜ್ಞಾನ ಸಂಪತ್ತನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಯೋಜನೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.



> “ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಶತಮಾನಗಳಷ್ಟು ಹಳೆಯ ಹಸ್ತಪ್ರತಿಗಳು ಮತ್ತು ದಾಖಲೆಗಳನ್ನು ಆಧುನಿಕ ತಂತ್ರಜ್ಞಾನಗಳ ಮೂಲಕ ಸಂರಕ್ಷಿಸಿ ಡಿಜಿಟಲೀಕರಣ ಮಾಡುವ ಮೂಲಕ ನಮ್ಮ ಸಾಂಸ್ಕೃತಿಕ ಪರಂಪರೆಯನ್ನು ಶಾಶ್ವತವಾಗಿ ಉಳಿಸುವುದು ಮುಖ್ಯ ಉದ್ದೇಶವಾಗಿದೆ. ಈ ಮೂಲಕ ಜ್ಞಾನ ಸಂಪತ್ತನ್ನು ಭವಿಷ್ಯದ ಪೀಳಿಗೆಗಳಿಗೆ ಉಳಿಸುವ ಜೊತೆಗೆ ಜಾಗತಿಕ ಮಟ್ಟದಲ್ಲಿ ಹಂಚಿಕೊಳ್ಳಲು ಸಾಧ್ಯವಾಗುತ್ತದೆ.”
>
> – **ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ.

ಹಸ್ತಪ್ರತಿಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆಗಳ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ವೇದಿಕೆಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡುವ ಉದ್ದೇಶ ಹೊಂದಿದೆ ಎಂದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ ಮಾತನಾಡಿ, ರಾಜ್ಯ ಮಟ್ಟದ ಸ್ಥಾಯಿ ಸಮಿತಿ ರಚನೆಗೊಂಡಿದ್ದು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿಯೂ ರಚಿಸಲಾಗಿದೆ ಎಂದರು.


ಜಿಲ್ಲಾ ಮಟ್ಟದ ಸಮಿತಿಯಲ್ಲಿ ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿದ್ದು, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು/ಸಹಾಯಕ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಜಿ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು, ಮಹಾನಗರಪಾಲಿಕೆ/ನಗರಸಭೆ ಪೌರಾಯುಕ್ತರು, ಕ್ಲಸ್ಟರ್ ಕೇಂದ್ರ ಸಂಯೋಜಕರು, ರಾಜ್ಯ ವಿಶ್ವವಿದ್ಯಾಲಯ/ಸಂಶೋಧನಾ ಸಂಸ್ಥೆಗಳ ನೋಂದಣಾಧಿಕಾರಿಗಳು ಹಾಗೂ ಹಸ್ತಪ್ರತಿ, ಶಿಲಾಶಾಸನಶಾಸ್ತ್ರ, ಇತಿಹಾಸ, ಸಂಸ್ಕೃತ, ಪ್ರಾದೇಶಿಕ ಭಾಷೆಗಳು ಮತ್ತು ಆರ್ಕೈವ್ ಕ್ಷೇತ್ರದ ತಜ್ಞರು ಸಮಿತಿಯ ಸದಸ್ಯರಾಗಿರುತ್ತಾರೆ ಎಂದು ವಿವರಿಸಿದರು.

ಜಿಲ್ಲೆಯ ಗ್ರಂಥಾಲಯಗಳು, ದೇವಾಲಯಗಳು, ಮಠಗಳು, ಶೈಕ್ಷಣಿಕ ಸಂಸ್ಥೆಗಳು ಮತ್ತು ಖಾಸಗಿ ಸಂಗ್ರಹಗಳಲ್ಲಿ ಇರುವ ಹಸ್ತಪ್ರತಿಗಳನ್ನು ಗುರುತಿಸಿ ದಾಖಲೆ ಮಾಡುವುದು, ಸಂಗ್ರಹ ಸ್ಥಳಗಳಿಗೆ ಪ್ರವೇಶ ಕಲ್ಪಿಸುವುದು, ಸಮೀಕ್ಷಾ ತಂಡಗಳಿಗೆ ಸಹಾಯ ಮಾಡುವುದು, ಜಾಗೃತಿ ಮೂಡಿಸುವುದು ಹಾಗೂ ಪ್ರಗತಿ ವರದಿಗಳನ್ನು ಸಲ್ಲಿಸುವುದು ಸಮಿತಿಯ ಕರ್ತವ್ಯಗಳಾಗಿವೆ ಎಂದು ತಿಳಿಸಿದರು.

ಸಭೆಯಲ್ಲಿ ಕ್ಲಸ್ಟರ್ ಕೇಂದ್ರಗಳ ಪಾತ್ರ, ಜಿಲ್ಲಾ ಮಟ್ಟದ ಸಮನ್ವಯ, ಸಮೀಕ್ಷಾ ವಿಧಾನ, ಮೇಲ್ವಿಚಾರಣೆ ಹಾಗೂ ನೈತಿಕ ಮಾರ್ಗಸೂಚಿಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಶಶಿಭೂಷಣ, ಎಸ್.ಎಂ. ಸಿಂಪಿಗೇರ, ಜಿ.ಎಸ್. ಗಾವಕರ್, ಗುರುಸಿದ್ದಪ್ಪಯ್ಯ ಹಿರೇಮಠ, ಶ್ರೀಧರ್‌ರಾವ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ತಿಮ್ಮಾಪೂರ ಗ್ರಾಮದಲ್ಲಿ ಕೆನರಾ ಬ್ಯಾಂಕ್ ಶಾಖೆ ತೆರೆಯಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ನೂತನ ಕೆನರಾ ಬ್ಯಾಂಕ್ ಶಾಖೆಯನ್ನು ತೆರೆಯುವಂತೆ ಬ್ಯಾಂಕಿನ ಪ್ರಾದೇಶಿಕ ಕಚೇರಿ (ಆರ್‌ಒ), ಬಾಗಲಕೋಟೆಯ ಡಿವಿಜನಲ್ ಮ್ಯಾನೇಜರ್ ಡಿ.ಸಿ. ಸತ್ಯನ್ ಅವರಿಗೆ ಗ್ರಾಮಸ್ಥರು ಮನವಿ ಸಲ್ಲಿಸಿದರು.

ಬಾಗಲಕೋಟೆಯ ಪ್ರಾದೇಶಿಕ ಕಚೇರಿಗೆ ಗ್ರಾಮದ ನಿಯೋಗ ಭೇಟಿ ನೀಡಿ, ತಿಮ್ಮಾಪೂರ ಗ್ರಾಮದಲ್ಲಿ ಬ್ಯಾಂಕ್ ಶಾಖೆಯ ಅವಶ್ಯಕತೆ ಹೆಚ್ಚಾಗಿದೆ. ಹಣಕಾಸು ವ್ಯವಹಾರಗಳಿಗಾಗಿ ಸಾರ್ವಜನಿಕರಿಗೆ, ವಿಶೇಷವಾಗಿ ವಯೋವೃದ್ಧರು ಹಾಗೂ ಮಹಿಳೆಯರಿಗೆ ತುಂಬಾ ತೊಂದರೆಯಾಗುತ್ತಿದೆ. ಆದ್ದರಿಂದ ಶೀಘ್ರವೇ ಬ್ಯಾಂಕ್ ಶಾಖೆ ತೆರೆಯಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಪ್ರಾದೇಶಿಕ ಕಚೇರಿ ವ್ಯವಸ್ಥಾಪಕ ರಂಜನ್ ಕುಮಾರ್ ಪಾಣಿ ಅವರು ಮಾತನಾಡಿ, ಮನವಿಯನ್ನು ಹಿರಿಯ ಅಧಿಕಾರಿಗಳಿಗೆ ಕಳುಹಿಸಿ ಸ್ಥಳ ಪರಿಶೀಲನೆ ನಡೆಸಿ ಶಾಖೆ ತೆರೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ರಾಮಪ್ಪ ಹಚ್ಚಪ್ಪನವರ, ನಿರ್ದೇಶಕ ಶರಣಪ್ಪ ಜೋಗಿನ ಹಾಗೂ ಹಿರಿಯರಾದ ಹಾಲಪ್ಪ ಹಂಚಿನಾಳ ಉಪಸ್ಥಿತರಿದ್ದರು.

# ಇಂದು 72ನೇ ಶಿವಾನುಭವ ಗೋಷ್ಠಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಅಕ್ಷರ ಭಾರತ ಪ್ರತಿಷ್ಠಾನ, ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಆಶ್ರಯದಲ್ಲಿ ಪಟ್ಟಣದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ಎಪ್ರಿಲ್ 29ರಂದು (ಬುಧವಾರ) ಸಂಜೆ 6.30ಕ್ಕೆ 72ನೇ ಶಿವಾನುಭವ ಗೋಷ್ಠಿಯನ್ನು ಹಮ್ಮಿಕೊಳ್ಳಲಾಗಿದೆ.

ಈ ಬಾರಿ ಗೋಷ್ಠಿಯಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ನರೇಗಲ್ಲ ಘಟಕದ ಅಧ್ಯಕ್ಷ ಎಂ.ಎಸ್. ಧಡೇಸೂರಮಠ ಅವರು “ಸಮಾಜ ಸುಧಾರಣೆಯಲ್ಲಿ ಬಸವ-ಅಂಬೇಡ್ಕರ್ ಚಿಂತನೆಗಳು” ವಿಷಯದ ಕುರಿತು ಮುಖ್ಯ ಉಪನ್ಯಾಸ ನೀಡಲಿದ್ದಾರೆ. ಮಹಾನ್ ಸಮಾಜ ಸುಧಾರಕರಾದ ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳು ಇಂದಿನ ಸಮಾಜಕ್ಕೆ ಹೇಗೆ ಪೂರಕವಾಗಿವೆ ಎಂಬುದನ್ನು ಅವರು ವಿವರಿಸಲಿದ್ದಾರೆ.

ಕಾರ್ಯಕ್ರಮವು ಹಾಲಕೆರೆ ಸಂಸ್ಥಾನಮಠದ ಪರಮಪೂಜ್ಯ ಶ್ರೀ ಮ.ನಿ.ಪ್ರ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಪಾವನ ಸಾನಿಧ್ಯದಲ್ಲಿ ನಡೆಯಲಿದೆ.

ಸಾಂಸ್ಕೃತಿಕ ಮತ್ತು ಧಾರ್ಮಿಕ ಚಿಂತನೆಗಳ ಸಂಗಮವಾಗಿರುವ ಈ ಗೋಷ್ಠಿಯಲ್ಲಿ ಪಟ್ಟಣದ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು, ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ರಾಜ್ಯ ಮಟ್ಟದಲ್ಲಿ ಗದಗ ನರ್ಸಿಂಗ್ ವಿದ್ಯಾರ್ಥಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಬಿಎಸ್ಸಿ ನರ್ಸಿಂಗ್ ವಿದ್ಯಾರ್ಥಿಗಳು ಬೆಂಗಳೂರಿನಲ್ಲಿ ನಡೆದ ರಾಜ್ಯಮಟ್ಟದ 25ನೇ ಫ್ಲಾರೆನ್ಸ್ ನೈಟಿಂಗೇಲ್ ಅವಾರ್ಡ್-2026 ಪ್ರಯುಕ್ತ ಹಮ್ಮಿಕೊಂಡಿರುವ ಸಂಸ್ಕೃತಿಕ ಸ್ಪರ್ಧೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಹಾಗೂ ಪೆನ್ಸಿಲ್ ಚಿತ್ರಕಲೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಸಂಸ್ಥೆಯ ಮುಖ್ಯಸ್ಥರಾದ ಐವನ ಇಗ್ಗಿ ಅವರು ವಿದ್ಯಾರ್ಥಿಗಳ ಈ ಗಮನಾರ್ಹ ಸಾಧನೆಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಈ ಸಂದರ್ಭದಲ್ಲಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ರೇಖಾ ಕೆ.ಬಿ. ಸೇರಿದಂತೆ ಇತರರು ಉಪಸ್ಥಿತರಿದ್ದರು.

## ದಾಖಲೆ, ಆಹಾರ ಸುರಕ್ಷತೆ, ಬಿಲ್ ತಯಾರಿ ವಿಷಯಗಳ ಕುರಿತು ಮಾರ್ಗದರ್ಶನ

# ನಿಲಯಗಳ ನಿರ್ವಹಣೆ ಕುರಿತು ಸಮಾಜ ಕಲ್ಯಾಣ ಸಿಬ್ಬಂದಿಗೆ ಕಾರ್ಯಾಗಾರ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಂಯುಕ್ತಾಶ್ರಯದಲ್ಲಿ ಎಪ್ರಿಲ್ 22ರಂದು ವಸತಿ ನಿಲಯಗಳು ಮತ್ತು ವಸತಿ ಶಾಲೆಗಳ ನಿರ್ವಹಣೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಕಾರ್ಯಾಗಾರವನ್ನು ಉದ್ಘಾಟಿಸಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ ಮಾತನಾಡಿ, ಕಾರ್ಯಾಗಾರದಲ್ಲಿ ನೀಡಲಾದ ಮಾಹಿತಿಯನ್ನು ಸಿಬ್ಬಂದಿಗಳು ಸಮರ್ಪಕವಾಗಿ ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಾಗಾರದಲ್ಲಿ ವಿವಿಧ ವಿಷಯಗಳ ಕುರಿತು ತಜ್ಞರು ಉಪನ್ಯಾಸ ನೀಡಿದರು. ನಿಲಯಗಳಲ್ಲಿ ದಾಖಲಾತಿ ನಿರ್ವಹಣೆ ಕುರಿತು ಬಿ.ಎಮ್. ಬಡಿಗೇರ, ನಿಲಯಗಳ ನಿರ್ವಹಣೆ ಕುರಿತು ಉದಯಕುಮಾರ ಯಲಿವಾಳ, ಆಹಾರ ಸಾಮಗ್ರಿಗಳ ಬೇಡಿಕೆ ಕುರಿತು ಗೋಪಾಲ ಟಿ. ಲಮಾಣಿ, ಬಿಲ್ ತಯಾರಿ ಕುರಿತು ಜಿಲ್ಲಾ ಪಂಚಾಯತ್ ಲೆಕ್ಕ ಅಧೀಕ್ಷಕ ಮಲ್ಲಿಕಾರ್ಜುನ ಹೊಸೂರ ಹಾಗೂ ಜಿಲ್ಲಾ ಖಜಾನೆ ಇಲಾಖೆಯ ಮುಖ್ಯ ಲೆಕ್ಕಿಗ ಸರ್ಫರಾಜ ಅಹಮ್ಮದ ಉಪನ್ಯಾಸ ನೀಡಿದರು. ಆಹಾರ ಸುರಕ್ಷತೆ ಕುರಿತು ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ರಾಜೇಂದ್ರ ಗಡಾದ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ. ತುಂಭರಮಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿಯ ವ್ಯವಸ್ಥಾಪಕ ಶ್ರೀಮತಿ ಮಂಜುಳಾ ಸೋಮಕ್ಕನವರ, ಸಹಾಯಕ ನಿರ್ದೇಶಕರಾದ ಗೋಪಾಲ ಟಿ. ಲಮಾಣಿ, ಉದಯಕುಮಾರ ಯಲಿವಾಳ, ಬಿ.ಎಮ್. ಬಡಿಗೇರ, ಶ್ರೀಮತಿ ಗೀತಾ ಆಲೂರ ಸೇರಿದಂತೆ ಕಚೇರಿ ಸಿಬ್ಬಂದಿ ಹಾಗೂ ಜಿಲ್ಲೆಯ ಎಲ್ಲಾ ನಿಲಯ ಮೇಲ್ವಿಚಾರಕರು ಉಪಸ್ಥಿತರಿದ್ದರು.

# ನಿಧನ

## ಲಕ್ಷ್ಮೀಬಾಯಿ ಪಾಟೀಲ



**ಗದಗ:** ಕುರ್ತಕೋಟಿ ಗುಡ್ಡಪ್ಪಗೌಡ ಪಾಟೀಲ ಮನೆತನದ ಸೊಸೆ ಲಕ್ಷ್ಮೀಬಾಯಿ ಗೋಪಾಲಗೌಡ ಪಾಟೀಲ (78) ದಿ.27ರಂದು ಕುರ್ತಕೋಟಿ ಗ್ರಾಮದಲ್ಲಿ ನಿಧನರಾದರು.

ದಿವಂಗತರಿಗೆ ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳಿದ್ದಾರೆ.

# ವಿಮಾನ ನಿಲ್ದಾಣಗಳಿಗೆ ಕನ್ನಡ ಮಹನೀಯರ ಹೆಸರಿಡಿ

▶▶ಮೊದಲನೇ ಪುಟದಿಂದ

ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಗ್ರಾಪಂ ಮಾಜಿ ಸದಸ್ಯ ಸೋಮಣ್ಣ ಬೆಟಗೇರಿ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ ಮಾತನಾಡಿ, ನಾಡಿಗೆ ಅನೇಕ ಮಹನೀಯರು ನೀಡಿದ ಕೊಡುಗೆಯನ್ನು ಮರೆಯಲು ಸಾಧ್ಯವಿಲ್ಲ.

ಅಂತಹ ಮಹನೀಯರ ಹೆಸರನ್ನು ವಿಮಾನ ನಿಲ್ದಾಣಗಳಿಗೆ ಇಡುವಲ್ಲಿ ಸರ್ಕಾರಗಳು ಹಿಂದೇಟು ಹಾಕುತ್ತಿರುವುದು ಸರಿಯಲ್ಲ. ಕನ್ನಡ ಜನರ ಧ್ವನಿಗೆ ಸರ್ಕಾರ ಕೂಡಲೇ ಕಿವಿಯಾಗಬೇಕು, ಇಲ್ಲವಾದರೆ ದೊಡ್ಡ ಮಟ್ಟದ ಹೋರಾಟ ನಡೆಯಲಿದೆ ಎಂದು ಎಚ್ಚರಿಸಿದರು.

ಈ ವೇಳೆ ಫಕ್ಕೀರಪ್ಪ ಮದ್ರಾಸಿ, ಶೇಖಣ್ಣ ಕಾಳೆ, ನೀಲಪ್ಪ ಪಡಗೇರಿ, ಮುದಕಣ್ಣ ಗದ್ದಿ, ನಾಗೇಶ ಅಮರಾಪೂರ, ಮಂಜುನಾಥ ಕಲ್ಲೂರ, ಮುತ್ತಣ್ಣ ಟೋಕಾಳಿ, ಹನುಮಂತ ಶರಸೂರಿ, ಬಸಪ್ಪ ರಟಗೇರಿ, ನೀಲಪ್ಪ ಬಸಾಪೂರ, ಕೈಸರ್ ಮಹಮ್ಮದ್ ಅಲಿ, ರಮೇಶ್ ಗೊಜಗೊಜಿ ಮತ್ತಿತರರು ಹಾಜರಿದ್ದರು.

# ಇಂದು ಉದ್ಯೋಗಕ್ಕಾಗಿ ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳಿಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಏಪ್ರಿಲ್ 29ರಂದು ಬೆಳಿಗ್ಗೆ 10 ಗಂಟೆಗೆ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಆಡಳಿತ ಭವನದ 2ನೇ ಮಹಡಿ, ರೂಂ ನಂ. 215ರಲ್ಲಿ ನಡೆಯುವ ಈ ಸಂದರ್ಶನದಲ್ಲಿ ಬೆಳಗಾವಿಯ ಫುಕೂಕು ಇಂಡಿಯಾ ಪ್ರೈವೇಟ್ ಲಿಮಿಟೆಡ್ (ಎಂಎನ್‌ಸಿ ಕಂಪನಿ) ಭಾಗವಹಿಸಲಿದೆ.

ಡಿಪ್ಲೋಮಾ ಹಾಗೂ ಬಿ.ಎ, ಬಿ.ಕಾಂ, ಬಿ.ಎಸ್‌ಸಿ, ಬಿ.ಬಿ.ಎ ಸೇರಿದಂತೆ ಯಾವುದೇ ಪದವಿ ಪಡೆದ ಅಭ್ಯರ್ಥಿಗಳು ಅರ್ಹರಾಗಿದ್ದಾರೆ. ಮಶೀನ್ ಆಪರೇಟರ್ ಮತ್ತು ಅಸೆಂಬ್ಲಿ ವಿಭಾಗದಲ್ಲಿ ನೇಮಕಾತಿ ನಡೆಯಲಿದೆ. ಅಭ್ಯರ್ಥಿಗಳ ವಯೋಮಿತಿ 18 ರಿಂದ 26 ವರ್ಷವಾಗಿರಬೇಕು. ಕೆಲಸದ ಸ್ಥಳ ಬೆಳಗಾವಿಯಾಗಿರುತ್ತದೆ. ಇ.ಎಸ್.ಐ, ಪಿ.ಎಫ್, ಬೋನಸ್ ಹಾಗೂ ಗ್ರಾಚ್ಯುಟಿ ಸೌಲಭ್ಯಗಳೂ ಲಭ್ಯವಿವೆ.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ರೆಸ್ಯೂಮ್ (ಬಯೋಡೇಟಾ) ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯನ್ನು ತರಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ನೋಂದಣಿ ಕಡ್ಡಾಯವಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಈ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ನೋಂದಣಿಯನ್ನು ಸಂದರ್ಶನದ ದಿನವೇ ಮಾಡಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9632607419, 6363330688, 9538862450 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೋ ಸಮ್ಮಾನ ಅಭಿಯಾನಡಿ ಸಹಿ ಸಂಗ್ರಹಿಸಿ ಸರ್ಕಾರಕ್ಕೆ ಮನವಿ

# ಗೋ ಸಂರಕ್ಷಣೆಗೆ ಕಠಿಣ ಕಾನೂನು ಜಾರಿಗೆ ಒತ್ತಾಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾಂಪ್ರದಾಯಿಕ ಪರಂಪರೆ ಹೊಂದಿರುವ ಭಾರತ ದೇಶದಲ್ಲಿ ಗೋವುಗಳಿಗೆ ದೇವತೆಗಳಂತೆ ಪೂಜ್ಯ ಸ್ಥಾನವಿದ್ದು, ಗೋಮಾತೆಯನ್ನು ಹತ್ಯೆ ಮಾಡುವವರ ವಿರುದ್ಧ ಕಠಿಣ ಕಾನೂನು ಜಾರಿಯಾಗಬೇಕು ಎಂದು ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಹೇಳಿದರು.

ಗೋ ಸಮ್ಮಾನ ಆಹ್ವಾನ ಅಭಿಯಾನದಡಿ ತಾಲೂಕಿನ ಪ್ರತಿ ಗ್ರಾಮದಿಂದ ಸಹಿ ಸಂಗ್ರಹಿಸಿ ರಾಷ್ಟ್ರಪತಿ, ಪ್ರಧಾನಮಂತ್ರಿ, ರಾಜ್ಯಪಾಲ ಹಾಗೂ ಮುಖ್ಯಮಂತ್ರಿಗಳಿಗೆ ತಹಸೀಲ್ದಾರ್ ಮುಖಾಂತರ ಮನವಿ ಸಲ್ಲಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಗೋವನ್ನು ಗೋಮಾತೆ ಹಾಗೂ ಭೂಮಿತಾಯಿಗೆ ಸಮಾನವೆಂದು ಪರಿಗಣಿಸಲಾಗುತ್ತಿದ್ದು, ಸಕಲ ದೇವತೆಗಳ ಆವಾಸ ಸ್ಥಾನ ಎಂಬ ನಂಬಿಕೆಯೂ ಇದೆ. ಕಾಮಧೇನು ಕಲ್ಪವೃಕ್ಷವೆಂಬ ನಂಬಿಕೆಯಿಂದ ಗೋಮಾತೆಯ ರಕ್ಷಣೆಗೆ ವಿಶೇಷ ಒತ್ತು ನೀಡಬೇಕು. ಇಂತಹ ಪರಿಸ್ಥಿತಿಯಲ್ಲಿ ಗೋಮಾತೆಯನ್ನು ಉಳಿಸಿಕೊಳ್ಳುವ ಅಗತ್ಯತೆ ಎದುರಾಗಿದೆ. ಮುಂಬರುವ ದಿನಗಳಲ್ಲಿ ಗೋ ರಕ್ಷಣೆಗೆ ಎಲ್ಲರೂ ಕಂಕಣಬದ್ಧರಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನೆ ತಾಲೂಕ ಅಧ್ಯಕ್ಷ ಈರಣ್ಣ ಪೂಜಾರ ಹಾಗೂ ಹಿಂದೂ ಯುವ ಮುಖಂಡ ನವೀನ ಹಿರೇಮಠ ಮಾತನಾಡಿ, ದೇಶಿ ಗೋವಂಶವನ್ನು ರಾಷ್ಟ್ರಮಾತೆ ಎಂದು ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು. ರಾಜ್ಯ ಮಟ್ಟದಲ್ಲೂ ದೇಶಿ ಗೋವಂಶವನ್ನು ರಾಜ್ಯ ಮಾತೆ ಎಂದು ಘೋಷಣೆ ಮಾಡಬೇಕು. ಗೋ ಹತ್ಯೆ ಮಾಡುವವರ ವಿರುದ್ಧ ಕಠಿಣ ಕಾನೂನು ಜಾರಿಗೊಳಿಸಿ, ಅಂತಹವರ ಆಸ್ತಿಯನ್ನು ಜಪ್ತಿ ಮಾಡಬೇಕು. ಶಾಲಾ ಪಠ್ಯಕ್ರಮದಲ್ಲಿ ಗೋ ವಿಜ್ಞಾನ ವಿಷಯವನ್ನು ಕಡ್ಡಾಯವಾಗಿ ಸೇರಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಎಂ.ಎಸ್. ದೊಡ್ಡಗೌಡ್ರ, ನಿಂಗಪ್ಪ ಬನ್ನಿ, ಥಾವರಪ್ಪ ಲಮಾಣಿ, ದುಂಡೇಶ ಕೋಟಗಿ, ಗಂಗಾಧರ ಮೆಣಸಿನಕಾಯಿ, ವಿಜಯ ಕುಂಬಾರ, ಪ್ರವೀಣ ಬೋಮಲೆ, ಸೋಮೇಶ ಉಪನಾಳ, ಮಂಜುನಾಥ ಹೊಗೆಸೊಪ್ಪಿನ, ಬಸವರಾಜ ಕಲ್ಲೂರ, ವಸಂತಗೌಡ ಪಾಟೀಲ, ಬಸವರಾಜ ಚಕ್ರಸಾಲಿ, ಪ್ರಕಾಶ ಮಾದನೂರ, ಭೀಮಣ್ಣ ಯಂಗಾಡಿ, ಮಂಜನಗೌಡ ಕೆಂಚನಗೌಡ್ರ, ಹನುಮಂತ ರಾಮಗೇರಿ, ಮಂಜುನಾಥ ಬಸಾಪುರ, ಬಸವರಾಜ ಮಜ್ಜಿಗುಡ್ಡ, ಪ್ರಶಾಂತ ಗಾಂಜಿ, ಅರುಣ ಪಾಟೀಲ, ದುಂಡಪ್ಪ ಸವಣೂರ, ರುದ್ರಪ್ಪ ಉಮಚಗಿ, ಆಕಾಶ ಸೌದತ್ತಿ, ಸುಮಂಗಲಾ ಕುಂಬಾರ, ವಿದ್ಯಾ ಅಂಗಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು.

# ಏ.30ರಂದು ಬಹಿರಂಗ ಹರಾಜು

■ವಿಜಯಸಾಕ್ಷಿ ಸುದ್ದಿ, ಗದಗ

ನರೇಗಲ್ಲ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿರುವ ಬೀದಿ ಬದಿ ವ್ಯಾಪಾರಸ್ಥರು, ಡಬ್ಬಿ ಅಂಗಡಿಗಳು ಹಾಗೂ ವಾರದ ಸಂತೆ (ಸೋಮವಾರ) ಕರ ಸಂಗ್ರಹಣೆಯನ್ನು ಗುತ್ತಿಗೆ ಮೂಲಕ ನಿರ್ವಹಿಸಲು ಬಹಿರಂಗ ಹರಾಜು ನಡೆಯಲಿದೆ. ಹರಾಜು ಪ್ರಕ್ರಿಯೆ ಎಪ್ರಿಲ್ 30, 2026ರಂದು ಮಧ್ಯಾಹ್ನ 3.30ಕ್ಕೆ ಪಟ್ಟಣ ಪಂಚಾಯತಿ ಕಚೇರಿಯಲ್ಲಿ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿತ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka